ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 97 Saturday **03-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 97 ಶನಿವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಬರದ ಬಿಸಿಲಿಗೆ ಬಾಡಿದ 40 ಸಾವಿರ ಹೆಕ್ಟೇರ್ ಬೆಳೆ!

ಪರಿಹಾರದ ನಿರೀಕ್ಷೆಯಲ್ಲಿ ಜಗಳೂರು ತಾಲೂಕಿನ ರೈತ ಸಮೂಹ

“ಮುಂಜಾನೆಯ ಮೆರಗು”

ಜಗಳೂರು, ಅ, 02– ಮುಂಗಾರು ಮಳೆಯ ನಿರೀಕ್ಷೆಯಲ್ಲಿ ಹೊಲಕ್ಕೆ ಬಿತ್ತನೆ ಬೀಜ ಹಾಕಿದ್ದ ರೈತರ ಪಾಲಿಗೆ ಈ ಬಾರಿ ಮಳೆರಾಯ ಮುನಿಸಿಕೊಂಡಿದ್ದಾನೆ. ಬಿತ್ತನೆ ಮಾಡಿದ ಬೆಳೆಗಳಿಗೆ ಸಮರ್ಪಕ ಮಳೆ ಸಿಗದೆ, ಬಿಸಿಲಿನ ತಾಪಕ್ಕೆ ಬೆಳೆಗಳು ಒಣಗುತ್ತಿರುವ ಪರಿಣಾಮ ಜಗಳೂರು ತಾಲೂಕಿನಲ್ಲಿ 40 ಸಾವಿರಕ್ಕೂ ಅಧಿಕ ಹೆಕ್ಟೇರ್ ಕೃಷಿ ಪ್ರದೇಶ ನಷ್ಟದ ಅಂಚಿಗೆ ತಲುಪಿದೆ. ಬೆಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಸಾವಿರಾರು ರೈತ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ.

ಜಗಳೂರು ತಾಲೂಕಿನಲ್ಲಿ ಒಟ್ಟು ಸುಮಾರು 54 ಸಾವಿರ ಹೆಕ್ಟೇರ್ ಬಿತ್ತನೆ ಪ್ರದೇಶವಿದೆ. ಈ ಬಾರಿ ರೈತರು ಮೆಕ್ಕೆಜೋಳ, ರಾಗಿ, ಶೇಂಗಾ, ಸೂರ್ಯಕಾಂತಿ, ಹತ್ತಿ, ತೊಗರಿ ಸೇರಿದಂತೆ ವಿವಿಧ ಬೆಳೆಗಳನ್ನು ಬಿತ್ತನೆ ಮಾಡಿದ್ದಾರೆ. ಆದರೆ ಬಿತ್ತನೆ ನಂತರ ನಿರೀಕ್ಷಿತ ಪ್ರಮಾಣದಲ್ಲಿ ಮುಂಗಾರು ಮಳೆ ಸುರಿಯದ ಕಾರಣ ಬಹುತೇಕ ಬೆಳೆಗಳು ಮಳೆ ಕೊರತೆಯ ಹೊಡೆತಕ್ಕೆ ಸಿಲುಕಿವೆ.

ಮಳೆಯ ನಿರೀಕ್ಷೆಯಲ್ಲಿ ಬಿತ್ತಿದ ಬೆಳೆ

ಮೇ ತಿಂಗಳಲ್ಲಿ ಸುರಿದ ಮಳೆಯನ್ನು ನಂಬಿ ಕೆಲ ರೈತರು ಮುಂಗಾರು ಆರಂಭಕ್ಕೂ ಮುನ್ನವೇ ಮೆಕ್ಕೆಜೋಳ ಬಿತ್ತನೆ ಮಾಡಿದ್ದರು. ಸುಮಾರು 10 ಸಾವಿರಕ್ಕೂ ಹೆಚ್ಚು ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ ಬಿತ್ತನೆ ಮಾಡಲಾಗಿತ್ತು. ಆರಂಭದಲ್ಲಿ ಬೆಳೆ ಚಿಗುರೊಡೆದು ರೈತರಲ್ಲಿ ಆಶಾಭಾವನೆ ಮೂಡಿಸಿತ್ತು. ಆದರೆ ನಂತರ ಮಳೆ ಕೈ–ಕೊಟ್ಟ ಪರಿಣಾಮ ಹೊಲದಲ್ಲಿನ ಬೆಳೆ



ಬೆಳವಣಿಗೆ ಕುಂಠಿತಗೊಂಡು ಒಣಗುವ ಸ್ಥಿತಿ ನಿರ್ಮಾಣವಾಗಿದೆ.

ಜೂನ್ ಮತ್ತು ಜುಲೈ ತಿಂಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆ ಸು–ರಿಯದ ಹಿನ್ನೆಲೆಯಲ್ಲಿ ಇನ್ನಷ್ಟು ರೈತರು ಮೆಕ್ಕೆಜೋಳದ ಬದಲು ರಾಗಿ ಸೇರಿದಂತೆ ಪರ್ಯಾಯ ಬೆಳೆಗಳತ್ತ ಮುಖ ಮಾಡಿದರು. ಆದರೆ ಮಳೆ ಕೊರತೆ ಅಲ್ಲಿಯೂ ರೈತರನ್ನು ಬೆಂಬಿಡದೆ ಕಾಡಿದೆ.

ಕಾಳು ಕಟ್ಟುವ ಮುನ್ನವೇ ರಾಗಿ ಒಣಗುತಿದೆ

ತಾಲೂಕಿನಲ್ಲಿ ಸುಮಾರು 25 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬಿತ್ತನೆ ಮಾಡಲಾಗಿದೆ ಎಂದು ಅಂದಾಜಿಸಲಾಗಿದೆ. ಇದೀಗ ರಾಗಿ ಬೆಳೆಗೆ ಕಾಳು ಕಟ್ಟುವ ನಿರ್ಣಾಯಕ ಹಂತದಲ್ಲಿಯೇ ಮಳೆ ಕೈಕೊಟ್ಟಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ.

ಮಳೆ ಇಲ್ಲದೆ ಭೂಮಿಯಲ್ಲಿ ತೇವಾಂಶದ ಕೊರತೆ ಉಂಟಾಗಿದ್ದು, ರಾಗಿ ತೆನೆಗಳು ಸಮರ್ಪಕವಾಗಿ ಬೆಳವಣಿಗೆಯಾಗದೆ ಒಣಗುತ್ತಿವೆ. ಉತ್ತಮ ಫಸಲಿನ ನಿರೀಕ್ಷೆಯಲ್ಲಿದ್ದ ರೈತರು ಇದೀಗ ಹೊಲದಲ್ಲಿ ಒಣಗುತ್ತಿರುವ ಬೆಳೆಯನ್ನು ನೋಡುತ್ತಾ ಕಂಗಾಲಾಗಿದ್ದಾರೆ.

ತೊಗರಿಗೂ ಬರದ ಬರೆ

ರಾಗಿ ಮತ್ತು ಮೆಕ್ಕೆಜೋಳ ಮಾತ್ರವಲ್ಲದೆ ತೊಗರಿ, ಶೇಂಗಾ, ಸೂರ್ಯಕಾಂತಿ, ಹತ್ತಿ ಸೇರಿದಂತೆ ವಿವಿಧ ಬೆಳೆಗಳ ಮೇಲೂ ಮಳೆ ಕೊರತೆಯ ಪರಿಣಾಮ ಬೀರಿದೆ. ಬಿತ್ತನೆ, ಬೀಜ, ಗೊಬ್ಬರ, ಕೂಲಿ ಸೇರಿದಂತೆ ಸಾವಿರಾರು ರೂಪಾಯಿ ಖರ್ಚು ಮಾಡಿರುವ ರೈತರಿಗೆ ಬೆಳೆ ಕೈಕೊಟ್ಟಿರುವುದು ಮತ್ತಷ್ಟು ಆರ್ಥಿಕ ಹೊರೆ ತಂದಿದೆ.

“ವರಣದೇವನ ಮುನಿಸಿನಿಂದ ರೈತ ಸಂಕಷ್ಟ”

“ಮಳೆ ಕೈಕೊಟ್ಟಿರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಿತ್ತನೆಗೆ ಮಾಡಿದ ಖರ್ಚು ಕೂಡ ವಾಪಸ್ ಬಾರದ ಸ್ಥಿತಿ ನಿರ್ಮಾಣವಾಗಿದೆ. ಸರ್ಕಾರ ರೈತರ ನೈಜ ಪರಿಸ್ಥಿತಿಯನ್ನು ಅರಿತು ಕೇವಲ ಪರಿಹಾರದ ಘೋಷಣೆಗೆ ಸೀಮಿತವಾಗದೆ, ಸಮರ್ಪಕ ಸಹಾಯಹಸ್ತ ಚಾಚಬೇಕು.”

––– ಚಿರಂಜೀವಿ, ಕರ್ನಾಟಕ ರಾಜ್ಯ ಚಿಕ್ಕಮಲ್ಲನಹೊಳೆ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಅಧ್ಯಕ್ಷ





ವಾಸ್ತವ ಸ್ಥಿತಿಯ ವರದಿ ಸರ್ಕಾರಕ್ಕೆ

ತಾಲೂಕಿನ ಕೃಷಿ ಪ್ರದೇಶದಲ್ಲಿನ ವಾಸ್ತವ ಪರಿಸ್ಥಿತಿ ಹಾಗೂ ಬೆಳೆ ಹಾನಿಯ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆ. ಎನ್‌ಡಿಆರ್‌ಎಫ್ ನಿಯಮಾವಳಿಗಳ ಪ್ರಕಾರ ಅರ್ಹ ರೈತರಿಗೆ ಸರ್ಕಾರದಿಂದ ಪರಿಹಾರ ದೊರೆಯಲಿದೆ.

ಶ್ವೇತಾ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು.

ಬರ ಘೋಷಣೆಯಾದರೂ ಪರಿಹಾರದ ನಿರೀಕ್ಷೆ

ಜಗಳೂರು ತಾಲೂಕನ್ನು ಸರ್ಕಾರ ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸಿದೆ. ಇದರಿಂದ ರೈತರಲ್ಲಿ ಪರಿಹಾರದ ನಿರೀ–ಕ್ಷೆ ಮೂಡಿದೆ. ಆದರೆ ಸರ್ಕಾರದಿಂದ ದೊರೆಯುವ ಪರಿಹಾರವು ರೈತರು ಬೆಳೆಗಾಗಿ ಮಾಡಿರುವ ಸಂಪೂರ್ಣ ವೆಚ್ಚವನ್ನು ಸರಿದೂಗಿಸುವುದೇ ಎಂಬ ಪ್ರಶ್ನೆ ಎದುರಾಗಿದೆ.

ಬರ ಪರಿಹಾರ ಘೋಷಣೆಯ ಜೊತೆಗೆ ಬೆಳೆ ನಷ್ಟದ ವೈಜ್ಞಾನಿಕ ಸಮೀಕ್ಷೆ ನಡೆಸಿ, ಅರ್ಹ ರೈತರಿಗೆ ಸಮರ್ಪಕ ಪರಿಹಾರ, ಬೆಳೆ ವಿಮೆ ಹಾಗೂ ಅಗತ್ಯ ನೆರವು ಒದಗಿಸಬೇಕು ಎಂಬುದು ರೈತರ ಒತ್ತಾಯವಾಗಿದೆ.

ಸ್ವಚ್ಛತೆಯೇ ಆರೋಗ್ಯದ ಮೊದಲ ಹೆಜ್ಜೆ; ಉತ್ತಮ ಸಮಾಜಕ್ಕೆ ಪರಿಸರ ಶುಚಿತ್ವ ಅಗತ್ಯ : ಕೆಂಚಪ್ಪ

“ಮುಂಜಾನೆಯ ಮೆರಗು”

ಜಗಳೂರು ಅ, 02– ಸ್ವಚ್ಛ ಹಾಗೂ ಆರೋಗ್ಯಕರ ಪರಿಸರ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಿದಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ (ಇಒ) ಕೆಂಚಪ್ಪ ಹೇಳಿದರು.



ಗುರುವಾರ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಿದ್ದ ಸ್ವಚ್ಛತಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸ್ವಚ್ಛತೆ ಎಂಬುದು ಕೇವಲ ಒಂದು ಇಲಾಖೆಯ ಜವಾಬ್ದಾರಿಯಲ್ಲ. ಪ್ರತಿಯೊಬ್ಬ ನಾಗರಿಕರು ತಮ್ಮ ಮನೆ, ಕಚೇರಿ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸ್ವಚ್ಛತಾ ಅಭಿಯಾನಕ್ಕೆ ಸಹಕಾರ ನೀಡಬೇಕು ಎಂದು ತಿಳಿಸಿದರು.

ಪರಿಸರದಲ್ಲಿ ಕಸವನ್ನು ಎಲ್ಲೆಂದರಲ್ಲಿ ಎಸೆಯದೆ, ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ವಿಂಗಡಿಸಿ ವಿಲೇವಾರಿ ಮಾಡಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವುದರ ಜತೆಗೆ, ಸ್ವಚ್ಛತೆ–ಯ ಮಹತ್ವದ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಸ್ವಚ್ಛ ಪರಿಸರದಿಂದ ಆರೋಗ್ಯಕರ ಜೀವನ ನಡೆಸಲು ಸಾಧ್ಯವಾಗುವುದರ ಜತೆಗೆ, ಗ್ರಾಮ ಹಾಗೂ ಪಟ್ಟಣಗಳ ಸೌಂದರ್ಯವೂ ಹೆಚ್ಚುತ್ತದೆ. ಹೀಗಾಗಿ ಸ್ವಚ್ಛತೆಯನ್ನು ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದ ಭಾಗವನ್ನಾಗಿ ಮಾಡಿಕೊಳ್ಳಬೇಕು ಎಂದು ಕೆಂಚಪ್ಪ ಕರೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿಯ ವಿವಿಧ ವಿಭಾಗಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಗಾಂಧೀಜಿ–ಶಾಸ್ತ್ರಿ ಆದರ್ಶಗಳು ಇಂದಿನ ಪೀಳಿಗೆಗೆ ದಾರಿದೀಪ

“ಮುಂಜಾನೆಯ ಮೆರಗು”

ಜಗಳೂರು ಅ, 02– ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಮಹಾತ್ಮ ಗಾಂಧೀಜಿ ಹಾಗೂ ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಸೇವೆ, ತ್ಯಾಗ ಮತ್ತು ಆದರ್ಶಗಳು ಅಪಾರವಾಗಿದ್ದು, ಇಂದಿನ ಪೀಳಿಗೆಗೆ ಸದಾ ದಾರಿದೀಪವಾಗಿವೆ ಎಂದು ಜೆ.ಎಂ. ಇಮಾಮ್ ಸ್ಮಾರಕ ಆಂಗ್ಲ ಮಾಧ್ಯಮ ಶಾಲೆಯ ಆಡಳಿತಾಧಿಕಾರಿ ಮುನ್ನಾ ಹೇಳಿದರು.

ಪಟ್ಟಣದ ಜೆ.ಎಂ. ಇಮಾಮ್ ಸ್ಮಾರಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶುಕ್ರವಾರ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಾತ್ಮ ಗಾಂಧೀಜಿ ಅವರು ಅಹಿಂಸೆ, ಸತ್ಯ ಮತ್ತು ಶಾಂತಿಯ ಮಾರ್ಗದ ಮೂಲಕ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ದಿಕ್ಕು ನೀಡಿ–ದರು. ಅವರ ಸರಳ ಜೀವನ, ಸ್ವಚ್ಛತೆ–ಯ ಬಗೆಗಿನ ಕಾಳಜಿ, ಸತ್ಯನಿಷ್ಠೆ ಹಾಗೂ ಸಾಮಾಜಿಕ ಸಮಾನತೆಯ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ. ವಿದ್ಯಾರ್ಥಿಗಳು ಗಾಂಧೀಜಿ ಅವರ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡು ಉತ್ತಮ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ತಿಳಿಸಿದರು.

ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸರಳತೆ, ಪ್ರಾಮಾಣಿಕತೆ ಹಾಗೂ ಕರ್ತವ್ಯನಿಷ್ಠೆಗೆ ಹೆಸರಾದವರು. ದೇಶದ ಕೃಷಿ ಮತ್ತು ಸೈನಿಕರ ಮಹತ್ವವನ್ನು ಎತ್ತಿಹಿಡಿದ ಅವರು, ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ಜೀವನ ಹಾಗೂ ಸಾಧನೆಗಳನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳುವ ಮೂಲಕ ದೇಶಭಕ್ತಿ ಮತ್ತು ಜವಾಬ್ದಾರಿಯ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.





ಮುಖ್ಯೋಪಾಧ್ಯಾಯ ಹಾಲಪ್ಪ ಮಾತನಾಡಿ, ಗಾಂಧೀಜಿ ಮತ್ತು ಶಾಸ್ತ್ರಿ ಅವರ ಜೀವನವು ಸರಳತೆ, ಶಿಸ್ತು, ಸತ್ಯ, ಪ್ರಾಮಾಣಿಕತೆ ಹಾಗೂ ದೇಶ ಸೇವೆಯ ಮಹತ್ವವನ್ನು ಸಾರುತ್ತದೆ. ಮಹನೀಯರ ಜಯಂತಿಯನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಅವರ ಆದರ್ಶಗಳನ್ನು ನಮ್ಮ ದೈನಂದಿನ ಬದುಕಿನಲ್ಲಿ ಅಳವಡಿಸಿಕೊಳ್ಳುವುದು ನಿಜವಾದ ಗೌರವವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿದರು. ಜಯಂತಿಯ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಶಂಕರ್, ಎಸ್. ಎಂ. ವಿಜಯಲಕ್ಷ್ಮಿ, ಎಂ. ಶಿಲ್ಪಾ, ಸೀಮಾ ತಬುಸಮ್, ಸುಷ್ಮಾ, ರೇಣುಕಾ, ಅಪೂರ್ವ, ನಾಗವೇಣಿ, ಹೇಮಾ, ರುಕ್ಸಾನಾ, ಆಸ್ಮಾ ಸೇರಿದಂತೆ ಶಾಲೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

ಗಾಂಧೀಜಿ, ಶಾಸ್ತ್ರಿ ತತ್ವಾದರ್ಶಗಳನ್ನು ಮೈಗೂಡಿಸಿಕೊಳ್ಳಿ

“ಮುಂಜಾನೆಯ ಮೆರಗು”

ಜಗಳೂರು, ಅ, 02– ದೇಶ ಸೇವೆಗೆ ತಮ್ಮ ಜೀವನವನ್ನೇ ಮುಡುಪಾಗಿಟ್ಟ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಿಡಿಪಿಒ ಶಿವಕುಮಾರ್ ಹೇಳಿದರು.



ಪಟ್ಟಣದ ಸಿಡಿಪಿಒ ಕಚೇರಿಯಲ್ಲಿ ಶುಕ್ರವಾರ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಗಾಂಧೀಜಿಯವರ ಸತ್ಯ, ಅಹಿಂಸೆ ಹಾಗೂ ಸರಳತೆಯ ಬದುಕು ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ ಪ್ರಾಮಾಣಿಕತೆ, ಶಿಸ್ತು ಹಾಗೂ ದೇಶಪ್ರೇಮ ಇಂದಿನ ಸಮಾಜಕ್ಕೆ ಮಾದರಿಯಾಗಿವೆ. ಅವರ ಆದರ್ಶಗಳನ್ನು ಯುವಜನತೆ ಹಾಗೂ ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮೇಲ್ವಿಚಾರಕರಾದ ಶಾಂತಮ್ಮ, ಅನುರಾಧಾ, ಶಶಿಕಲಾ, ಶಾಂತಮ್ಮ ಸೇರಿದಂತೆ ಕಚೇರಿ ಸಿಬ್ಬಂದಿ ಉಪಸ್ಥಿತರಿದ್ದರು.

ಗಾಂಧೀಜಿ–ಶಾಸ್ತ್ರಿ ಆದರ್ಶಗಳು ವಿಶ್ವಕ್ಕೆ ಮಾದರಿ: ಅಮರೇಶ್

“ಮುಂಜಾನೆಯ ಮೆರಗು”

ಜಗಳೂರು ಅ, 02– ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿಯವರ ಸರಳತೆ, ಪ್ರಾಮಾಣಿಕತೆ, ಶಿಸ್ತು ಹಾಗೂ ದೇಶಸೇವೆಯ ಆದರ್ಶಗಳು ಇಂದಿಗೂ ಇಡೀ ವಿಶ್ವಕ್ಕೆ ಮಾದರಿಯಾಗಿವೆ ಎಂದು ಅಂಬೇಡ್ಕರ್ ವಸತಿ ಶಾಲೆಯ ಪ್ರಾಂಶುಪಾಲ ಅಮರೇಶ್ ಹೇಳಿದರು.



ತಾಲೂಕಿನ ಹೊಸಟ್ಟಿ ಸಮೀಪದಲ್ಲಿರುವ ಅಂಬೇಡ್ಕರ್ ವಸತಿ ಶಾಲೆಯಲ್ಲಿ ಶುಕ್ರವಾರ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿಯನ್ನು ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಇಬ್ಬರು ಮಹನೀಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಲಾಯಿತು.

ನಂತರ ಮಾತನಾಡಿದ ಶಿಕ್ಷಕರು, ದೇಶದ ಸ್ವಾತಂತ್ರ್ಯ ಚಳವಳಿಯಲ್ಲಿ ಮಹಾತ್ಮ ಗಾಂಧೀಜಿ ಅವರು ಅಹಿಂಸೆ ಮತ್ತು ಸತ್ಯಾಗ್ರಹದ ಮೂಲಕ ಜನರಲ್ಲಿ ಸ್ವಾತಂತ್ರ್ಯದ ಹೋರಾಟದ ಅರಿವು ಮೂಡಿಸಿದರು. ಸತ್ಯ, ಅಹಿಂಸೆ, ಸರಳತೆ ಹಾಗೂ ಸ್ವಚ್ಛತೆಯಂತಹ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜಕ್ಕೆ ಮಾದರಿಯಾದರು ಎಂದು ಸ್ಮರಿಸಿದರು.

ಅದೇ ರೀತಿ ಲಾಲ್ ಬಹದ್ದೂರ್ ಶಾಸ್ತ್ರಿಯವರು ಸರಳ ಜೀವನ, ಶಿಸ್ತು ಮತ್ತು ದೇಶಪ್ರೇಮಕ್ಕೆ ಹೆಸರಾಗಿದ್ದರು. ಪ್ರಧಾನಿಯಾಗಿ ದೇಶದ ಅಭಿವೃದ್ಧಿ ಹಾಗೂ ಜನರ ಕಲ್ಯಾಣಕ್ಕೆ ನೀಡಿದ ಕೊಡುಗೆಗಳು ಸ್ಮರಣೀಯವಾಗಿವೆ. ಅವರ ಜೀವನದ ಮೌಲ್ಯಗಳನ್ನು ಇಂದಿನ ಯುವಜನತೆ ಹಾಗೂ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳು ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ ಜೀವನ, ದೇಶಸೇವೆ ಹಾಗೂ ಆದರ್ಶಗಳ ಕುರಿತು ತಿಳಿದುಕೊಂಡು, ತಮ್ಮ ದಿನನಿತ್ಯದ ಬದುಕಿನಲ್ಲಿ ಸತ್ಯ, ಶಿಸ್ತು, ಸ್ವಚ್ಛತೆ ಮತ್ತು ದೇಶಪ್ರೇಮವನ್ನು ಬೆಳೆಸಿಕೊಳ್ಳಬೇಕು ಎಂದು ಶಿಕ್ಷಕರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅಂಬೇಡ್ಕರ್ ವಸತಿ ಶಾಲೆಯ ಬೋಧಕ ಮತ್ತು ಬೋಧ–ಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ಗಾಂಧೀಜಿಯವರ ತತ್ವ–ಆದರ್ಶಗಳು ಇಂದಿನ ಸಮಾಜಕ್ಕೆ ದಾರಿದೀಪ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ

"ಮುಂಜಾನೆಯ ಮೆರಗು"

ದಾವಣಗೆರೆ, ಅ.02– ನಮ್ಮ ಭಾಷೆ ಮತ್ತು ತಾಯಿನಾಡು ನಮಗೆ ಎಷ್ಟು ಮುಖ್ಯವೋ, ಗಾಂಧೀಜಿಯವರು ಕೂಡ ಭಾರತದ ಪ್ರತಿಯೊಬ್ಬ ಪ್ರಜೆಯ ಅಸ್ಮಿತೆಯಾಗಿದ್ದಾರೆ. ಗಾಂಧೀಜಿ ಎಂದರೆ ಕೇವಲ ಒಬ್ಬ ವ್ಯಕ್ತಿಯಲ್ಲ, ಅವರೊಂದು ಸಂಸ್ಕೃತಿ, ಆಸ್ತಿ, ವಿಶ್ವಕೋಶ ಹಾಗೂ ಜೀವನಕ್ರಮ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಅವರು ಪ್ರತಿಪಾದಿಸಿದರು.

ಅವರು ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಂಯುಕ್ತಾಶ್ರಯದಲ್ಲಿ ರಾಮನಗರದ ಗಾಂಧಿಭವನದಲ್ಲಿ ಏರ್ಪಡಿಸಿದ್ದ ಮಹಾತ್ಮ ಗಾಂಧೀಜಿ ಅವರ 157 ನೇ ಜಯಂತಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ 122 ನೇ ಜಯಂತಿಯನ್ನು ಚರಕ ನುಲಿಯುವ ಮೂಲಕ ಹಾಗೂ ಗಣ್ಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಇಂದಿನ ಜಾಗತಿಕ ಸನ್ನಿವೇಶದಲ್ಲಿ ನಡೆಯುತ್ತಿರುವ ವಿವಿಧ ಘಟನೆಗಳಿಗೆ ಗಾಂಧೀಜಿಯವರ ತತ್ವಗಳು, ಆದರ್ಶಗಳು ಮತ್ತು ಮಾರ್ಗದರ್ಶನವೇ ಪ್ರಮುಖ ದಾರಿದೀಪವಾಗಿವೆ. ಗಾಂಧೀಜಿಯವರು ಅಂತರರಾಷ್ಟ್ರೀಯ ಮಟ್ಟವನ್ನು ಮೀರಿ ಬೆಳೆದ ಅಗಾಧ ವ್ಯಕ್ತಿತ್ವ ಹೊಂದಿದವರಾಗಿದ್ದು, ದೇಶ–ವಿದೇಶಗಳಲ್ಲಿ ನಮ್ಮತನವನ್ನು



ಹೆಮ್ಮೆಯಿಂದ ಗುರುತಿಸಿಕೊಳ್ಳಲು ಅವರ ಚಿಂತನೆಗಳು ಪ್ರಮುಖ ಆಧಾರವಾಗಿವೆ ಎಂದು ತಿಳಿಸಿದರು.

ಮಾನವೀಯತೆ ಇಲ್ಲದ ವಿಜ್ಞಾನ ಮತ್ತು ತಂತ್ರಜ್ಞಾನವು ಮಾನವಕುಲಕ್ಕೆ ಅನುಕೂಲಕ್ಕಿಂತ ಹೆಚ್ಚಾಗಿ ಹಾನಿಯನ್ನೇ ಉಂಟುಮಾಡುತ್ತದೆ. ಹೀಗಾಗಿ ಇಂದಿನ ಕಾಲಘಟ್ಟದಲ್ಲಿ ಹಾಗೂ ಮುಂದಿನ ಪೀಳಿಗೆಗೆ ಗಾಂಧೀಜಿಯವರ ವಿಚಾರಗಳನ್ನು ಅರ್ಥೈಸಿಕೊಳ್ಳುವುದು ಅತ್ಯಂತ ಅನಿವಾರ್ಯವಾಗಿದೆ ಎಂದರು.

ಸಮಾಜದಲ್ಲಿ ಸ್ವಚ್ಛತೆ ಮತ್ತು ಸಂಸ್ಕಾರದ ಜಾಗೃತಿ ಮೂಡುವುದು ಅತ್ಯಗತ್ಯ. ಸಾರ್ವಜನಿಕ ಸ್ಥಳಗಳಲ್ಲಿ ಪ್ಲಾಸ್ಟಿಕ್ ಬಾಟಲಿ ಹಾಗೂ ತ್ಯಾಜ್ಯ ಎಸೆಯುವ ಪ್ರವೃತ್ತಿ ತಡೆದು, ದಿನನಿತ್ಯದ ಜೀವನದಲ್ಲಿ ನೈರ್ಮಲ್ಯವನ್ನು ಸಂಸ್ಕಾರವನ್ನಾಗಿ ಅಳವಡಿಸಿಕೊಳ್ಳಬೇಕು ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಸಾಹಿತ್ಯ ಎಂ ಆಲದಕಟ್ಟಿ ಅವರು ಮಾತನಾಡಿ, ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ತತ್ವಗಳು, ನೈತಿಕ ಮೌಲ್ಯಗಳು ಹಾಗೂ ಸರಳತೆಯ ಜೀವನ ನಮಗೆಂದೂ ಮಾರ್ಗದರ್ಶಕ ಮತ್ತು ಪ್ರೇರಣಾದಾಯಿಯಾಗಿದೆ. ಮಹಾನ್ ನಾಯಕರ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಗಾಂಧೀಜಿಯವರು ದೇಶದ ಹಳ್ಳಿಗಳನ್ನು ಸ್ವಚ್ಛ, ಸ್ವಾವಲಂಬಿ ಹಾಗೂ ಸದೃಢ ಘಟಕಗಳನ್ನಾಗಿ ಕಾಣಲು ಬಯಸಿದ್ದರು. ಪ್ರಸ್ತುತ ಜಾರಿಯಲ್ಲಿರುವ ಪಂಚಾಯತ್ ರಾಜ್ ವ್ಯವಸ್ಥೆ ಹಾಗೂ ಆಡಳಿತಾತ್ಮಕ ಯೋಜನೆಗಳು ಗಾಂಧೀಜಿಯವರ 'ಗ್ರಾಮ ಸ್ವರಾಜ್ಯ'ದ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿವೆ ಎಂದರು.

ಲಾಲ್ ಬಹದ್ದೂರ್ ಶಾಸ್ತ್ರಿ ಅವರು ತಮ್ಮ ಸಚಿವ ಅವಧಿಯಲ್ಲಿ ಸಂಭವಿಸಿದ ರೈಲು ಅಪಘಾತಕ್ಕೆ ನೈತಿಕ ಹೊಣೆ ಹೊತ್ತು ರೈಲ್ವೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ ಶಾಸ್ತ್ರಿಜಿಯವರ ಪ್ರಾಮಾಣಿಕತೆ ಹಾಗೂ ಜವಾಬ್ದಾರಿಯುತ ನಾಯಕತ್ವ ಇಂದಿನ ಪೀಳಿಗೆಗೆ ಅತ್ಯಂತ ಮಾದರಿಯಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಿದ್ಧಗಂಗಾ ಶಾಲೆ, ಈಶ್ವರಮ್ಮ ಶಾಲೆ ಹಾಗೂ ಅಜಯ್ ನಾರಾಯಣ್ ಅವರು ಪ್ರಸ್ತುತಪಡಿಸಿದ ಭಜನೆ ಸಭಿಕರನ್ನು ಆಕರ್ಷಿಸಿತು. ಜಿಲ್ಲೆಯಲ್ಲಿ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಈ ಬಾರಿಯ ಗಾಂಧಿ ಜಯಂತಿಯನ್ನು ಅತ್ಯಂತ ಸರಳವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ಅವರು ನಿರೂಪಿಸಿದರು , ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಧನಂಜಯ್ ಅವರು ವಂದಾನರ್ಪಣೆ ಮಾಡಿದರು.

ಮಹಾತ್ಮ ಗಾಂಧೀಜಿ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಮತ್ತು ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿದ್ದು ಪ್ರಶಸ್ತಿ ವಿಜೇತರಿಗೆ



ಪ್ರಮಾಣ ಪತ್ರ ವಿತರಿಸಲಾಯಿತು. ಪ್ರಶಸ್ತಿ ವಿಜೇತರ ವಿವರಗಳು:

ಪ್ರೌಢಶಾಲಾ ವಿಭಾಗ : ಪ್ರಥಮ ಬಹುಮಾನ ಮೆಳ್ಳೆಕಟ್ಟೆ ಸರ್ಕಾರಿ ಪ್ರೌಢಶಾಲೆಯ ಚೇತನಬಿ.ಟಿ., ದ್ವಿತೀಯ ಬಹುಮಾನ ಪಿ.ಎಂ.ಶ್ರೀಸರ್ಕಾರಿ ಪ್ರೌಢಶಾಲೆಯ ತೇಜಸ್ವಿನಿ ಡಿ ಹಾಗೂ ತೃತೀಯ ಬಹುಮಾನ, ಶ್ರೀಸಿದ್ದಗಂಗಾ ಪ್ರೌಢಶಾಲಾ ಕೋಮಲ ಎಸ್.ಪಿ.

ಪದವಿ ಪೂರ್ವ ವಿಭಾಗ: ಪ್ರಥಮ ಬಹುಮಾನ, ದಾವಣಗೆರೆ ಮಾಜಿ ಪುರಸಭೆ ಸರ್ಕಾರಿ ಪದವಿಪೂರ್ವ ಕಾಲೇಜಿನ ಮೆಹಕ್ಎಂ., ದ್ವಿತೀಯ ಬಹುಮಾನ, ಹರಿಹರ ಅಂಬೇಡ್ಕರ್ ಪದವಿ ಪೂರ್ವ ಕಾಲೇಜಿನ ಚೇತನ್ ಎಂ ಹಾಗೂ ತೃತೀಯಬಹುಮಾನ, ದಾವಣಗೆರೆ ದವನ್ ಪದವಿಪೂರ್ವ ಕಾಲೇಜಿನಸೌಜನ್ಯವೈ ಎಂ .

ಪದವಿ ವಿಭಾಗ: ಪ್ರಥಮ ಬಹುಮಾನ, ದಾವಣಗೆರೆ ಎಸ್.ಬಿ.ಸಿ ಕಾಲೇಜಿನ ಮೇಘನಾ ಎಂ., ದ್ವಿತೀಯ ಬಹುಮಾನ, ಬಸವಾಪಟ್ಟಣದ ಜನತಾಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ತ್ರಿವೇಣಿಸಿ.ಎನ್ಹಾಗೂ ತೃತೀಯಬಹುಮಾನ, ಎಸ್.ಜಿ.ಕೆ.ಕೆ.ಎಸ್. ಎಫ್ .ಜಿ ಮಹಿಳಾ ಕಾಲೇಜಿನ ಅಮೃತ ಎನ್

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೇಖರ್ ಹೆಚ್.ಟಿ, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಯೋಜನಾ ನಿರ್ದೇಶಕ ಗಿರೀಶ್, ಮಹಾನಗರ ಪಾಲಿಕೆ ಆಯುಕ್ತ ಡಾ.ಮಹಾಂತೇಶ್, ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಮಮತಾ ಗೌಡರ್ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್, ದುಡಾ ಆಯುಕ್ತೆ ರೇಣುಕಾ, ತಹಶೀಲ್ದಾರ್ ರಾಜೇಶ್ ಸಮಾಜ ಸೇವಕ ಅವರಗೆರೆ ರುದ್ರಮುನಿ ಸೇರಿದಂತೆ ಇತರರಿದ್ದರು.

ಆರ್ಯಭಟ ರಾಷ್ಟ್ರೀಯ ಪ್ರಶಸ್ತಿಗೆ ಶಿಕ್ಷಕ ಗದಿಗೆಪ್ಪ ಮ್ಯಾಚಾರ್ ಭಾಜನ

ಶಿಕ್ಷಣ ಕ್ಷೇತ್ರ ಹಾಗೂ ಸಮಾಜಮುಖಿ ಸೇವೆಯನ್ನು ಗುರುತಿಸಿ ಗೌರವ । ಧಾರವಾಡದಲ್ಲಿ ಪ್ರಶಸ್ತಿ ಪ್ರದಾನ

"ಮುಂಜಾನೆಯ ಮೆರಗು"

ಹರಿಹರ ಅ, 02– ತಾಲೂಕಿನ ಕುಕನೂರು ಗ್ರಾಮದ ಶಿಕ್ಷಕ ಗದಿಗೆಪ್ಪ ಮ್ಯಾಚಾರ್ ಅವರು ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ಗುರುತಿಸಿ ಪ್ರತಿಷ್ಠಿತ ಶ್ರೀ ಆರ್ಯಭಟ ರಾಷ್ಟ್ರೀಯ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಸೆಪ್ಟೆಂಬರ್ 26ರಂದು ಧಾರವಾಡದಲ್ಲಿ ನಡೆದ ಸಮಾರಂಭದಲ್ಲಿ ಗದಿಗೆಪ್ಪ ಮ್ಯಾಚಾರ್ ಅವರು ಪ್ರಶಸ್ತಿಯನ್ನು ಸ್ವೀಕರಿಸಿದರು. ಶ್ರೀ ಸರ್ವಜನ ಆರ್ಟ್ಸ್ ಕಲರ್ ಟ್ರಸ್ಟ್ (ರಿ.), ಬೆಂಗಳೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಧಾರವಾಡ ಇವರ ಸಹಭಾಗಿತ್ವದಲ್ಲಿ ಎಸ್ಎಸ್ಎಸಿಟಿ ಗೋಲ್ಡನ್ ಅವಾರ್ಡ್ಸ್ ಟ್ರಸ್ಟ್‌ನ 9ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಸಾಂಸ್ಕೃತಿಕ ವೈಭವದೊಂದಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಯೋಜಿಸಲಾಗಿತ್ತು.



ಕಾರ್ಯಕ್ರಮವನ್ನು ನಿವೃತ್ತ ನ್ಯಾಯಮೂರ್ತಿ ಹಾಗೂ ಕರ್ನಾಟಕ ಲೋಕಾಯುಕ್ತದ ಮಾಜಿ ಲೋಕಾಯುಕ್ತ ಸಂತೋಷ್ ಹೆಗ್ಡೆ ಅವರು ಉದ್ಘಾಟಿಸಿದರು. ರಾಜ್ಯದ ವಿವಿಧ ಜಿಲ್ಲೆಗಳಿಂದ ಶಿಕ್ಷಣ ಹಾಗೂ ಸಮಾಜಸೇವಾ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದವರನ್ನು ಆಯ್ಕೆ ಮಾಡಿ ಗೌರವಿಸಲಾಯಿತು. ರಾಜ್ಯದ 36 ಜಿಲ್ಲೆಗಳಿಂದ ತಲಾ ಒಬ್ಬರನ್ನು ಆಯ್ಕೆ ಮಾಡಿ ಆರ್ಯಭಟ ರಾಷ್ಟ್ರೀಯ ಪ್ರಶಸ್ತಿಯನ್ನು ಪ್ರದಾನ ಮಾಡಲಾಗಿದ್ದು, ದಾವಣಗೆರೆ ಜಿಲ್ಲೆಯಿಂದ ಗದಿಗೆಪ್ಪ ಮ್ಯಾಚಾರ್ ಅವರು ಪ್ರಶಸ್ತಿಗೆ ಆಯ್ಕೆಯಾಗಿರುವುದು ಜಿಲ್ಲೆಯ ಶಿಕ್ಷಣ ಕ್ಷೇತ್ರಕ್ಕೆ ಹೆಮ್ಮೆಯ ಸಂಗತಿಯಾಗಿದೆ.

ಹಲವು ಪ್ರಶಸ್ತಿಗಳ ಗರಿಮೆ

ಗದಿಗೆಪ್ಪ ಮ್ಯಾಚಾರ್ ಅವರು ಈ ಹಿಂದೆ ತಾಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದ ವಿವಿಧ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಶಿಕ್ಷಕರ ಸಮಸ್ಯೆಗಳು ಹಾಗೂ ಕುಂದುಕೊರತೆಗಳನ್ನು ಸಂಬಂಧಿಸಿದ ಇಲಾಖೆಯ ಗಮನಕ್ಕೆ ತಂದು ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಶಿಕ್ಷಕರ ಹಿತಕ್ಕಾಗಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಶಿಕ್ಷಣ ಕ್ಷೇತ್ರದ ಸೇವೆಯ ಜತೆಗೆ ಸಮಾಜಮುಖಿ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಅವರು, ಅಗತ್ಯವಿರುವವರಿಗೆ ನೆರವು ನೀಡುವುದು, ಸಾಮಾಜಿಕ ಸಮಸ್ಯೆಗಳ ಕುರಿತು ಸ್ಪಂದಿಸುವುದು ಸೇರಿದಂತೆ ವಿವಿಧ ಜನಪರ ಕಾರ್ಯಗಳಲ್ಲಿ ಮುಂಚೂಣಿಯಲ್ಲಿದ್ದಾರೆ. ಅವರ ಸೇವಾ ಮನೋಭಾವ ಹಾಗೂ ಬದ್ಧತೆಯನ್ನು ಗುರುತಿಸಿ ಆರ್ಯಭಟ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಗದಿಗೆಪ್ಪ ಮ್ಯಾಚಾರ್ ಅವರಿಗೆ ರಾಷ್ಟ್ರೀಯ ಪ್ರಶಸ್ತಿ ಲಭಿಸಿರುವ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲೆಯ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ದಕ್ಷಿಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಿಕ್ಷಕ ವೃಂದ, ಸ್ನೇಹಿತರು, ಹಿತೈಷಿಗಳು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ.

ಗಣಪತಿ ವಿಸರ್ಜನೆ ಮೆರವಣಿಗೆಯಲ್ಲಿ ಶಾಸಕ ಸಮರ್ಥ್ ಶಾಮನೂರು ಭಾಗಿ

"ಮುಂಜಾನೆಯ ಮೆರಗು"

ದಾವಣಗೆರೆ ಅ, 02– ನಗರದ ಗಾಂಧಿನಗರದ 3ನೇ ಕ್ರಾಸ್ನಲ್ಲಿ ಶ್ರೀ ಗಣೇಶ ಮೂರ್ತಿ ವಿಸರ್ಜನೆ ಪ್ರಯುಕ್ತ ಆಯೋಜಿಸಲಾಗಿದ್ದ ಮೆರವಣಿಗೆ ಕಾರ್ಯಕ್ರಮದಲ್ಲಿ ಶಾಸಕ ಸಮರ್ಥ್ ಶಾಮನೂರು ಭಾಗವಹಿಸಿ, ಶ್ರೀ ಗಣೇಶನಿಗೆ ಭಕ್ತಿಪೂರ್ವಕವಾಗಿ ನಮಸ್ಕರಿಸಿದರು.



ಭಕ್ತಿ, ಸಂಭ್ರಮ ಹಾಗೂ ಸಡಗರದಿಂದ ನಡೆದ ಮೆರವಣಿಗೆಯಲ್ಲಿ ಶಾಸಕ ಸಮರ್ಥ್ ಶಾಮನೂರು ಅವರು ಸ್ಥಳೀಯರು, ಭಕ್ತರು ಹಾಗೂ ಸಾರ್ವಜನಿಕರೊಂದಿಗೆ ಪಾಲ್ಗೊಂಡರು. ಈ ಸಂದರ್ಭದಲ್ಲಿ ಭಕ್ತರು ಗಣೇಶನಿಗೆ ವಿಶೇಷ ಪೂಜೆ ಸಲ್ಲಿಸಿ, ಭಕ್ತಿಭಾವದಿಂದ ಮೆರವಣಿಗೆಯಲ್ಲಿ ಭಾಗವಹಿಸಿದರು.

ಗಣೇಶನ ಜಯಘೋಷಗಳೊಂದಿಗೆ ಸಾಗಿದ ಮೆರವಣಿಗೆಯಲ್ಲಿ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡಿದ್ದು, ಗಾಂಧಿನಗರದ 3ನೇ ಕ್ರಾಸ್ನಲ್ಲಿ ಹಬ್ಬದ ವಾತಾವರಣ ಮನೆಮಾಡಿತ್ತು. ಭಕ್ತರು ವಿಘ್ನನಿವಾರಕ ಶ್ರೀ ಗಣೇಶನಲ್ಲಿ ನಾಡಿನ ಸುಖ, ಶಾಂತಿ, ಸಮೃದ್ಧಿ ಹಾಗೂ ಎಲ್ಲರ ಒಳಿತಿಗಾಗಿ ಪ್ರಾರ್ಥಿಸಿದರು.

ದಸರಾ ಚಿತ್ರಸಂತೆಯಲ್ಲಿ ಕಲಾವಿದರ ಸೃಜನಶೀಲತೆಗೆ ವೇದಿಕೆ

"ಮುಂಜಾನೆಯ ಮೆರಗು"

ಮೈಸೂರು, ಅ, 02– ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಆಯೋಜಿಸಿರುವ 'ದಸರಾ ಚಿತ್ರಸಂತೆ' ಕಲಾವಿದರ ಸೃಜನಶೀಲತೆಗೆ ವಿಶಿಷ್ಟ ವೇದಿಕೆಯಾಗಿ ಗಮನ ಸೆಳೆಯಿತು. ಚಿತ್ರಸಂತೆಯನ್ನು ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸಿ, ವಿವಿಧ ಕಲಾಕೃತಿಗಳನ್ನು ವೀಕ್ಷಿಸಿದರು.

ಚಿತ್ರಸಂತೆಯಲ್ಲಿ ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಕಲಾವಿದರು ತಮ್ಮ ವಿಭಿನ್ನ ಕಲಾಕೃತಿಗಳನ್ನು ಪ್ರದರ್ಶಿಸಿದರು. ನಿಸರ್ಗ, ಗ್ರಾಮೀಣ ಬದುಕು, ಸಂಸ್ಕೃತಿ, ಪರಂಪರೆ ಸೇರಿದಂತೆ ವಿವಿಧ ವಿಷಯಗಳನ್ನು ಆಧರಿಸಿದ ಚಿತ್ರಗಳು ಕಲಾಭಿಮಾನಿಗಳ ಗಮನ ಸೆಳೆದವು. ಕಲಾವಿದರು ತಮ್ಮ ಕಲ್ಪನೆ ಮತ್ತು ಸೃಜನಶೀಲತೆಯನ್ನು ಬಣ್ಣಗಳ ಮೂಲಕ



ಅನಾವರಣಗೊಳಿಸಿದರು.

ಚಿತ್ರಸಂತೆಗೆ ಭೇಟಿ ನೀಡಿದ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಕಲಾವಿದರೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿ, ಅವರ ಕಲಾಕೃತಿಗಳ ಕುರಿತು ಮಾಹಿತಿ ಪಡೆದುಕೊಂಡರು. ಕಲಾವಿದರ ಪ್ರತಿಭೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ್ದಾಗಿವೆ ಎಂಬ ಅಭಿಪ್ರಾಯವೂ ವ್ಯಕ್ತವಾಯಿತು.

ದಸರಾ ಮಹೋತ್ಸವದ ಹಿನ್ನೆಲೆಯಲ್ಲಿ ನಗರದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತಿರುವ ನಡುವೆ ಚಿತ್ರಸಂತೆ ಕಲಾಭಿಮಾನಿಗಳಿಗೆ ವಿಭಿನ್ನ ಅನುಭವ ನೀಡಿತು. ಕುಟುಂಬ ಸಮೇತರಾಗಿ ಆಗಮಿಸಿದ ಸಾರ್ವಜನಿಕರು ಚಿತ್ರಗಳನ್ನು ವೀಕ್ಷಿಸಿ, ಮೆಚ್ಚಿನ ಕಲಾಕೃತಿಗಳ ಕುರಿತು ಕಲಾವಿದರಿಂದ ಮಾಹಿತಿ ಪಡೆದರು.

ದಸರಾ ಆಚರಣೆಯ ಸಾಂಸ್ಕೃತಿಕ ವೈವಿಧ್ಯತೆಗೆ ಚಿತ್ರಸಂತೆ ಮತ್ತಷ್ಟು ಮೆರುಗು ನೀಡಿದ್ದು, ಕಲಾವಿದರು ಹಾಗೂ ಚಿತ್ರಪ್ರೇಮಿಗಳ ಉತ್ಸಾಹದಿಂದ ಕಾರ್ಯಕ್ರಮ ವಿಶೇಷವಾಗಿ ಕಂಗೊಳಿಸಿತು.

ಈ ಸಂದರ್ಭದಲ್ಲಿ ಶಾಸಕರಾದ ಹರೀಶ್ ಗೌಡ, ಶ್ರೀವತ್ಸ ಸೇರಿದಂತೆ ವಿವಿಧ ಮುಖಂಡರು, ಅಧಿಕಾರಿಗಳು, ಕಲಾವಿದರು ಹಾಗೂ ಚಿತ್ರಪ್ರೇಮಿಗಳು ಉಪಸ್ಥಿತರಿದ್ದರು.

ಕಾವೇರಿ ಆರತಿ ಕಾರ್ಯಕ್ರಮ: ಭದ್ರತಾ ವ್ಯವಸ್ಥೆ ಪರಿಶೀಲಿಸಿದ ಜಿಲ್ಲಾ ಪೊಲೀಸ್ ಅಧೀಕ್ಷಕಿ

"ಮುಂಜಾನೆಯ ಮೆರಗು"

ಮೈಸೂರು ಅ, 02– ಕೆ.ಆರ್.ಎಸ್ನ ಬೃಂದಾವನದ ಬಳಿ ದಸರಾ ಉತ್ಸವದ ಅಂಗವಾಗಿ ಅಕ್ಟೋಬರ್ 11ರಿಂದ ನಡೆಯಲಿರುವ ಕಾವೇರಿ ಆರತಿ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಆಗಮಿಸಲಿರುವ ಹಿನ್ನೆಲೆಯಲ್ಲಿ, ಜಿಲ್ಲಾ ಪೊಲೀಸ್ ಅಧೀಕ್ಷಕಿ ಡಾ. ಶೋಭಾರಾಣಿ ವಿ.ಜೆ., ಐಪಿಎಸ್ ಅವರು ಕಾರ್ಯಕ್ರಮದ ಸ್ಥಳಕ್ಕೆ ಭೇಟಿ ನೀಡಿ ಭದ್ರತಾ ವ್ಯವಸ್ಥೆ ಹಾಗೂ ಅಗತ್ಯ ಸಿದ್ಧತೆಗಳನ್ನು ಪರಿಶೀಲಿಸಿದರು.



ಕಾರ್ಯಕ್ರಮ ನಡೆಯಲಿರುವ ಸ್ಥಳದಲ್ಲಿ ಕೈಗೊಳ್ಳಬೇಕಾದ ಭದ್ರತಾ ಕ್ರಮಗಳು, ಪೊಲೀಸ್ ಬಂದೋಬಸ್ತ್ ಹಾಗೂ ಇತರೆ ವ್ಯವಸ್ಥೆಗಳ ಕುರಿತು ಪರಿಶೀಲನೆ ನಡೆಸಿದ ಅವರು, ಕಾರ್ಯಕ್ರಮಕ್ಕೆ ಆಗಮಿಸುವ ಗಣ್ಯರು ಮತ್ತು ಸಾರ್ವಜನಿಕರಿಗೆ ಸೂಕ್ತ ಭದ್ರತೆ ಕಲ್ಪಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಸಿದ್ಧತೆಗಳನ್ನು ಅವಲೋಕಿಸಿದರು.

ದಸರಾ ಉತ್ಸವದ ಅಂಗವಾಗಿ ನಡೆಯಲಿರುವ ಕಾವೇರಿ ಆರತಿ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಆಗಮಿಸಲಿರುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುತ್ತಿದೆ. ಕಾರ್ಯಕ್ರಮವು ಸುಗಮವಾಗಿ ನಡೆಯುವಂತೆ ಸೂಕ್ತ ಭದ್ರತಾ ವ್ಯವಸ್ಥೆ ಕಲ್ಪಿಸಲು ಸ್ಥಳ ಪರಿಶೀಲನೆ ನಡೆಸಲಾಯಿತು.

ಬಾಪು ನಡೆದಾಡಿದ ನೆಲದಲ್ಲಿ ಗಾಂಧಿ ಆದರ್ಶಗಳ ನವೋದಯ: ಡಿ.ಕೆ.ಶಿವಕುಮಾರ್

"ಮುಂಜಾನೆಯ ಮೆರಗು"

ಮೈಸೂರು, ಅ, 02– ಮಹಾತ್ಮ ಗಾಂಧೀಜಿ ಅವರ ತ್ಯಾಗ, ಅಹಿಂಸೆ ಹಾಗೂ ಸತ್ಯದ ವಿಚಾರಧಾರೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಹಲವು ಸ

ಮುಖ್ಯ ಚುನಾವಣಾಧಿಕಾರಿ ಕಚೇರಿ ನಮ್ಮ ಹೋರಾಟಕ್ಕೆ ಮಣಿದಿದೆ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

"ಮುಂಜಾನೆಯ ಮೆರಗು"

ಬೆಂಗಳೂರು ಅ, 02– ಎಸ್‌ಐಆರ್ ನೆಪದಲ್ಲಿ ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ ಷಡ್ಯಂತ್ರವನ್ನು ಖಂಡಿಸಿ ನಡೆಸಿದ ನಮ್ಮ ಹೋರಾಟಕ್ಕೆ ಮುಖ್ಯ ಚುನಾವಣಾಧಿಕಾರಿ ಕಚೇರಿ ಮಣಿದಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಮತದಾರರ ಹೆಸರನ್ನು ಅಳಿಸುವ ಉದ್ದೇಶದಿಂದ ಫಾರ್ಮ್ 6, ಫಾರ್ಮ್ 6ಎ ಹಾಗೂ ಫಾರ್ಮ್ 7 ಬಳಸಿ ಸುಳ್ಳು ಅರ್ಜಿಗಳನ್ನು ಸಲ್ಲಿಸಿರುವವರ ವಿರುದ್ಧ ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ಚುನಾವಣಾ ನೋಂದಣಿ ಅಧಿಕಾರಿಗಳಿಗೆ ಮುಖ್ಯ ಚುನಾವಣಾಧಿಕಾರಿ ಕಚೇರಿ ಸೂಚನೆ ನೀಡಿದೆ. ಮತದಾರರ ಪಟ್ಟಿಯಿಂದ ಅರ್ಹ ಮತದಾರರನ್ನು ತೆಗೆದುಹಾಕಲು ಯತ್ನಿಸುವವರ ವಿರುದ್ಧ ಪ್ರಕರಣ ದಾಖಲಿಸಲು ಚುನಾವಣಾಧಿಕಾರಿಗಳು ಒಪ್ಪಿಗೆ ನೀಡಿದ್ದಾರೆ ಎಂದು ಅವರು ತಿಳಿಸಿದರು.

ಮರಣ ಹಾಗೂ ಎರಡು ಬಾರಿ ನೋಂದಣಿಯಾದ ಪ್ರಕರಣಗಳನ್ನು ಹೊರತುಪಡಿಸಿ ಬೇರೆ ಯಾವುದೇ ಫಾರ್ಮ್ 7 ಅನ್ನು ಅನುಮೋದಿಸಬಾರದು ಎಂದು ಮುಖ್ಯ ಚುನಾವಣಾಧಿಕಾರಿ ರಾಜ್ಯದ ಎಲ್ಲಾ ತಹಶೀಲ್ದಾರ್‌ಗಳಿಗೆ ನಿರ್ದೇಶನ ನೀಡಿದ್ದಾರೆ. ಮರಣ ಪ್ರಕರಣಗಳಲ್ಲಿ ಮರಣ ಪ್ರಮಾಣಪತ್ರ ಕಡ್ಡಾಯವಾಗಿ ಸಲ್ಲಿಕೆಯಾಗಬೇಕು. ಎರಡು ಬಾರಿ ನೋಂದಣಿಯಾಗಿದ್ದರೆ ಎರಡನೇ ಎಪಿಕ್ ಸಂಖ್ಯೆಯನ್ನು ನಮೂದಿಸಬೇಕು ಎಂದು ಸೂಚಿಸಲಾಗಿದೆ.

ಎಸ್‌ಐಆರ್ ಅಕ್ರಮದ ಕುರಿತು ಹಲವು ಪ್ರಕರಣಗಳು ಗಮನಕ್ಕೆ ಬಂದಿದ್ದು, ಇದರಲ್ಲಿ ವಿಪಕ್ಷಗಳ ಕುತಂತ್ರವಿದೆ. ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು, ದಲಿತರು ಹಾಗೂ ಆರ್ಥಿಕವಾಗಿ ದುರ್ಬಲ ವರ್ಗಗಳ ಮತದಾರರನ್ನು ಗುರಿಯಾಗಿಸಿಕೊಂಡು ಈ ಪ್ರಕ್ರಿಯೆ ನಡೆಸಲಾಗಿದೆ. ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಹೆಸರುಗಳನ್ನು ಅಳಿಸಲು ಅರ್ಜಿಗಳನ್ನು ಸಲ್ಲಿಸಿರುವ ಪ್ರಕರಣಗಳು ವರದಿಯಾಗಿದ್ದು, ಕೆಲವು ಕ್ಷೇತ್ರಗಳಲ್ಲಿ ಇಂತಹ ಅರ್ಜಿಗಳು ಸಾವಿರಾರು ಸಂಖ್ಯೆಯಲ್ಲಿವೆ ಎಂದು ಹೇಳಿದರು.



ಈ ಬಗ್ಗೆ ಹಲವು ಜಿಲ್ಲೆಗಳಲ್ಲಿ ಮತದಾರರು ಈಗಾಗಲೇ ದೂರುಗಳನ್ನು ಸಲ್ಲಿಸಿದ್ದು, ಕೆಲವು ಪ್ರಕರಣಗಳಲ್ಲಿ ಎಸ್‌ಐಆರ್‌ಗಳೂ ದಾಖಲಾಗಿವೆ. ತಮ್ಮ ಹೆಸರು ಅಥವಾ ಮತದಾನದ ಹಕ್ಕಿನ ಮೇಲೆ ಪರಿಣಾಮ ಬೀರಿರುವುದನ್ನು ಗಮನಿಸಿದ ಬಳಿಕ ಮತದಾರರು ದೂರು ನೀಡಿದ್ದಾರೆ. ಕೆಲವು ರಾಜಕೀಯ ನಾಯಕರು ಹಿರಿಯ ನಾಯಕರಿಂದ ಫಾರ್ಮ್ 7 ಅರ್ಜಿಗಳನ್ನು ಪಡೆದಿರುವುದಾಗಿ ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದರು.

ಮುಖ್ಯ ಚುನಾವಣಾಧಿಕಾರಿ ಕಚೇರಿಯ ಅಧಿಕಾರಿಗಳು ಹಾಗೂ ಕಾನೂನು ತಜ್ಞರು ಸಭೆ ನಡೆಸಿ ಕೆಲವು ತೀರ್ಮಾನಗಳನ್ನು ಕೈಗೊಂಡಿದ್ದಾರೆ. ನಮ್ಮ ಹೋರಾಟಕ್ಕೆ ಮುಖ್ಯ ಚುನಾವಣಾಧಿಕಾರಿ ಕಚೇರಿ ಮಣಿದಿದೆ. ಅರ್ಹ ಮತದಾರರಿಗೆ ನ್ಯಾಯ ಒದಗಿಸುವ ಭರವಸೆ ಸಿಕ್ಕಿದೆ. ಸೂಕ್ತ ತನಿಖೆ ನಡೆಯದಿದ್ದರೆ ಮತ್ತೆ ಹೋರಾಟ ಮಾಡುತ್ತೇವೆ. ಇದರಲ್ಲಿ ವಿರೋಧ ಪಕ್ಷಗಳ ಕುತಂತ್ರವಿದೆ. ನಮ್ಮ ದಾಖಲೆಗಳನ್ನು ನೋಡಿ ಮುಖ್ಯ ಚುನಾವಣಾಧಿಕಾರಿ ಕಚೇರಿ ಅಚ್ಚರಿ ವ್ಯಕ್ತಪಡಿಸಿದೆ. ಇದು ನಾಡಿನ ಜನತೆ ನಮಗೆ ಕೊಟ್ಟಿರುವ ಹಕ್ಕು. 136 ಮಂದಿಯನ್ನು ಗೆಲ್ಲಿಸಿ ಇಡೀ ಜನರ ರಕ್ಷಣೆ ಮಾಡುವಂತೆ ಜನರು ಸೂಚಿಸಿದ್ದಾರೆ. ಅದರಂತೆ ನಾವು ಈ ನಾಡಿನ ಜನರ ಹಕ್ಕನ್ನು ರಕ್ಷಿಸಲು ಇಂದು ಹೋರಾಟ ಮಾಡಿದ್ದೇವೆ ಎಂದು ಹೇಳಿದರು.

ಇದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಡೆದಿರುವ ಅತಿದೊಡ್ಡ ವಂಚನೆ. ಮುಖ್ಯ ಚುನಾವಣಾಧಿಕಾರಿ ಕಚೇರಿಯು ನಮ್ಮನ್ನು ಮನವೊಲಿಸಲು ಬಂದರೂ ನಾವು ಜಗ್ಗಲಿಲ್ಲ. ಮಹಾತ್ಮ ಗಾಂಧೀಜಿ ನಮಗೆ ಹೇಳಿಕೊಟ್ಟ ಮಾರ್ಗದಲ್ಲಿ ಚುನಾವಣಾ ಅಧಿಕಾರಿಗಳಿಗೆ ಅವರ ಕಚೇರಿಯಲ್ಲಿ ಕುಳಿತು ಅಕ್ರಮದ ಬಗ್ಗೆ ಮನದಟ್ಟು ಮಾಡಿಕೊಟ್ಟಿದ್ದೇವೆ. ಅಗತ್ಯ ದಾಖಲೆಗಳನ್ನು ನೀಡಿ ತಕ್ಷಣವೇ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದೇವೆ ಎಂದು ತಿಳಿಸಿದರು.

ವಿಪಕ್ಷ ನಾಯಕರಾದ ಆರ್. ಅಶೋಕ್ ಅವರು 25,000 ಫಾರ್ಮ್ 7 ಅರ್ಜಿಗಳನ್ನು ವಿತರಿಸಲಾಗಿದೆ ಎಂದು ಹೇಳಿದ್ದಾರೆ. ಅದು ಒಂದಾಗಿರಲಿ, ಹತ್ತಾಗಿರಲಿ, 25 ಸಾವಿರವಾಗಿರಲಿ ಅಥವಾ 25 ಲಕ್ಷವಾಗಿರಲಿ, ತನಿಖೆ ತನ್ನದೇ ಆದ ರೀತಿಯಲ್ಲಿ ನಡೆಯಲಿದೆ. ಈ ಅರ್ಜಿಗಳನ್ನು ಎಲ್ಲಿಂದ ಮುದ್ರಿಸಲಾಯಿತು? ಹೇಗೆ ಮುದ್ರಿಸಲಾಯಿತು? ಯಾರು ವಿತರಿಸಿದರು? ಎಂಬುದು ನಮ್ಮ ಪ್ರಶ್ನೆ ಎಂದು ಹೇಳಿದರು.

ನಾವು ಜನರ ಮತದಾನದ ಹಕ್ಕನ್ನು ರಕ್ಷಿಸಲು ಬದ್ಧರಾಗಿದ್ದೇವೆ. ಮುಖ್ಯ ಚುನಾವಣಾಧಿಕಾರಿ ಕಚೇರಿ ನೋಟಿಸ್ ನೀಡಿರುವ ಬಾಕಿ 35 ಲಕ್ಷ ಮತದಾರರಿಗೆ ಅಗತ್ಯ ದಾಖಲೆ ಒದಗಿಸಲು ಸರ್ಕಾರ ಬದ್ಧವಾಗಿದೆ. ರಾಜ್ಯದ ಪ್ರತಿಯೊಬ್ಬ ಅರ್ಹ ಮತದಾರನಿಗೂ ಮತದಾನದ ಹಕ್ಕು ಸಿಗುವವರೆಗೂ ನಮ್ಮ ಹೋರಾಟ ಮುಂದುವರಿಯಲಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಪರಮೇಶ್ವರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರು, ಶಾಸಕರು ಹಾಜರಿದ್ದರು.

ಗ್ರಾಮ ಒನ್, ಕರ್ನಾಟಕ ಒನ್ ಆಪರೇಟರ್ಗಳ ಸಮಸ್ಯೆ ಪರಿಹರಿಸಿ: ವಿಜಯೇಂದ್ರ ಆಗ್ರಹ

"ಮುಂಜಾನೆಯ ಮೆರಗು"

ಬೆಂಗಳೂರು, ಅ, 02– ರಾಜ್ಯದ ನಿರುದ್ಯೋಗಿ ಯುವಕರಿಗೆ ಸ್ವಯಂ ಉದ್ಯೋಗದ ಅವಕಾಶ ಕಲ್ಪಿಸುವ ಉದ್ದೇಶದಿಂದ ಹಿಂದಿನ ಬಿಜೆಪಿ ಸರ್ಕಾರ ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳನ್ನು ಸ್ಥಾಪಿಸಿತ್ತು. ಈ ಕೇಂದ್ರಗಳ ಮೂಲಕ ಸಾವಿರಾರು ಯುವಕರು ಸ್ವಾವಲಂಬಿ ಬದುಕು ಕಟ್ಟಿಕೊಂಡಿದ್ದಾರೆ. ಆದರೆ, ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಈ ಯುವಕರು ಸಂಕಷ್ಟ ಎದುರಿಸುವಂತಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ವಿವಿಧ ನಿರ್ಧಾರಗಳಿಂದ ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳ ನಿರ್ವಾಹಕರು ಆರ್ಥಿಕ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ಹಿಂದೆ 500 ಬರುತ್ತಿದ್ದ ವಿದ್ಯುತ್ ಬಿಲ್ ಈಗ 1,500ಕ್ಕೆ ಏರಿಕೆಯಾಗಿದೆ. ಅಗತ್ಯ ವಸ್ತುಗಳು ಹಾಗೂ ಸೇವೆಗಳ ದರ ಏರಿಕೆಯಿಂದ ಜನಸಾಮಾನ್ಯರು ತೊಂದರೆ ಅನುಭವಿಸುತ್ತಿದ್ದರೂ, ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳ ನಿರ್ವಾಹಕರಿಗೆ ಅನುಕೂಲವಾಗುವಂತಹ ಯಾವುದೇ ಸೌಲಭ್ಯಗಳನ್ನು ಸರ್ಕಾರ ಒದಗಿಸಿಲ್ಲ ಎಂದು ಟೀಕಿಸಿದರು.

ಸರ್ಕಾರವು ಪ್ರತಿ ಶನಿವಾರ 'ಪ್ರಜಾ ಸೇವೆ' ಹೆಸರಿನಲ್ಲಿ ಆಪರೇಟರ್ಗಳು ತಮ್ಮ ಕಂಪ್ಯೂಟರ್ಗಳನ್ನು ತೆಗೆದುಕೊಂಡು ಹೋಬಳಿ ಕೇಂದ್ರಗಳಿಗೆ ತೆರಳಿ ಸೇವೆ ಸಲ್ಲಿಸಬೇಕೆಂದು ಸೂಚಿಸಿದೆ. ಇಲ್ಲದಿದ್ದರೆ ಕೇಂದ್ರಗಳ ಮಾನ್ಯತೆ ರದ್ದುಪಡಿಸುವ ಎಚ್ಚರಿಕೆ ನೀಡಲಾಗುತ್ತಿದೆ ಎಂಬುದು ಆಪರೇಟರ್ಗಳ ಆತಂಕವಾಗಿದೆ ಎಂದು ವಿಜಯೇಂದ್ರ ತಿಳಿಸಿದರು.

ಸರ್ಕಾರಿ ನೌಕರರಿಗೆ ನಿಗದಿತ ವೇತನವಿದೆ. ರಾಜಕಾರಣಿಗಳಿಗೆ ಪ್ರಚಾರದ ಅವಕಾಶಗಳಿವೆ. ಆದರೆ, ಸ್ವಂತ ಖರ್ಚಿನಲ್ಲಿ ಕಂಪ್ಯೂಟರ್ ಸೇರಿದಂತೆ ಅಗತ್ಯ ಉಪಕರಣಗಳನ್ನು ನಿರ್ವಹಿಸುವ ಆಪರೇಟರ್ಗಳು ಶನಿವಾರದಂದು ಹೆಚ್ಚುವರಿ ಸೇವೆ ಸಲ್ಲಿಸಿದರೆ ಅವರ ಪ್ರಯಾಣ ವೆಚ್ಚ ಮತ್ತು ದಿನದ ಭತ್ಯೆಯನ್ನು ಯಾರು ಭರಿಸುತ್ತಾರೆ ಎಂದು ಪ್ರಶ್ನಿಸಿದರು.

ಆಪರೇಟರ್ಗಳು ತಮ್ಮ ಕೇಂದ್ರಗಳನ್ನು ಮುಚ್ಚಿ ಹೋಬಳಿ ಕೇಂದ್ರಗಳಿಗೆ ತೆರಳಿದ ಸಂದರ್ಭದಲ್ಲಿ ಗ್ರಾಮೀಣ ಜನರಿಗೆ ಆಯಾ ಕೇಂದ್ರಗಳಲ್ಲಿ ಸಿಗಬೇಕಾದ ಸೇವೆ ವ್ಯತ್ಯಯವಾದರೆ ಅದಕ್ಕೆ ಹೊಣೆ ಯಾರು ಎಂಬುದನ್ನೂ ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಯುವಕರಿಗೆ ಸ್ವಯಂ ಉದ್ಯೋಗದ ಅವಕಾಶ ಕಲ್ಪಿಸುವುದರ ಜತೆಗೆ ಅವರ ಜೀವನೋಪಾಯಕ್ಕೂ ಸರ್ಕಾರ ಆದ್ಯತೆ ನೀಡಬೇಕು. ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳ ನಿರ್ವಾಹಕರ ಮೇಲಿನ ಒತ್ತಡ ಹಾಗೂ ಕಿರುಕುಳದ ಆರೋಪಗಳಿಗೆ ಸರ್ಕಾರ ಸ್ಪಂದಿಸಬೇಕು. ಶನಿವಾರದಂದು ಹೆಚ್ಚುವರಿ ಸೇವೆ ಸಲ್ಲಿಸುವ ಆಪರೇಟರ್ಗಳಿಗೆ ಸೂಕ್ತ ಭತ್ಯೆ ನೀಡಬೇಕು ಮತ್ತು ವಿದ್ಯುತ್ ಬಿಲ್ ಹೊರೆಯನ್ನು ತಗ್ಗಿಸಲು ರಿಯಾಯಿತಿ ಕಲ್ಪಿಸಬೇಕು. ಈ ಮೂಲಕ ಅವರ ಆರ್ಥಿಕ ಸಂಕಷ್ಟಕ್ಕೆ ಪರಿಹಾರ ಒದಗಿಸಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ಜೆ.ಪಿ. ಭವನದಲ್ಲಿ ಗಾಂಧೀಜಿ, ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಆಚರಣೆ

ಮಹಾನ್ ನಾಯಕರ ತತ್ವ, ಆದರ್ಶಗಳನ್ನು ಸ್ಮರಿಸಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ

"ಮುಂಜಾನೆಯ ಮೆರಗು"

ಬೆಂಗಳೂರು ಅ, 02– ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಭಾರತದ ಎರಡನೇ ಪ್ರಧಾನಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಅಂಗವಾಗಿ ಬೆಂಗಳೂರಿನ ಜೆ.ಪಿ. ಭವನದಲ್ಲಿರುವ ಪಕ್ಷದ ಕೇಂದ್ರ ಕಚೇರಿಯಲ್ಲಿ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಇಬ್ಬರು ಮಹಾನ್ ನಾಯಕರಿಗೆ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ, ದೇಶದ ಸ್ವಾತಂತ್ರ್ಯ ಹೋರಾಟ, ರಾಷ್ಟ್ರ ನಿರ್ಮಾಣ ಹಾಗೂ ಸಾರ್ವಜನಿಕ ಜೀವನಕ್ಕೆ ಅವರು ನೀಡಿದ ಅಮೂಲ್ಯ ಕೊಡುಗೆಗಳನ್ನು ಸ್ಮರಿಸಲಾಯಿತು.

ಮಹಾತ್ಮ ಗಾಂಧೀಜಿ ಅವರು ಸತ್ಯ, ಅಹಿಂಸೆ ಮತ್ತು ಶಾಂತಿಯ ಮಾರ್ಗದ ಮೂಲಕ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ದಿಕ್ಕು ನೀಡಿದರು. ಸತ್ಯಾಗ್ರಹದ ಮೂಲಕ ಬ್ರಿಟಿಷರ ವಿರುದ್ಧ ಜನಸಾಮಾನ್ಯರನ್ನು ಸಂಘಟಿಸಿ, ಸ್ವಾತಂತ್ರ್ಯ ಚಳವಳಿಯಲ್ಲಿ ಸಾಮಾನ್ಯ ಜನರ ಪಾಲ್ಗೊಳ್ಳುವಿಕೆಗೆ ಪ್ರೇರಣೆ ನೀಡಿದರು. ಅವರ ಸರಳ ಜೀವನ, ಅಹಿಂಸೆಯ ತತ್ವ ಹಾಗೂ ಸರ್ವಧರ್ಮ ಸಮಭಾವದ ಸಂದೇಶ ಇಂದಿಗೂ ಪ್ರಸ್ತುತವಾಗಿವೆ.

ಅದೇ ರೀತಿ, ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸರಳತೆ, ಪ್ರಾಮಾಣಿಕತೆ ಮತ್ತು ಕರ್ತವ್ಯನಿಷ್ಠೆಗೆ ಹೆಸರಾದ ನಾಯಕರು. ಪ್ರಧಾನಮಂತ್ರಿಯಾಗಿ ದೇಶದ ಕೃಷಿ ಮತ್ತು ರಕ್ಷಣಾ ಕ್ಷೇತ್ರಗಳಿಗೆ ಮಹತ್ವ ನೀಡಿದ್ದ ಅವರು, 'ಜೈ ಜವಾನ್, ಜೈ ಕಿಸಾನ್' ಎಂಬ ಘೋಷಣೆಯ ಮೂಲಕ ಸೈನಿಕರು ಹಾಗೂ ರೈತರ ಮಹತ್ವವನ್ನು ಸಾರಿದರು. ದೇಶದ ಸಂಕಷ್ಟದ ಸಂದರ್ಭಗಳಲ್ಲಿ ಜನರಲ್ಲಿ ಆತ್ಮವಿಶ್ವಾಸ ಮತ್ತು ದೇಶಭಕ್ತಿಯ ಭಾವನೆ ಮೂಡಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ.

ಇಂತಹ ಮಹಾನ್ ನಾಯಕರ ಜಯಂತಿಗಳು ಕೇವಲ ಆಚರಣೆಗೆ ಸೀಮಿತವಾಗದೆ, ಅವರು ಪ್ರತಿಪಾದಿಸಿದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಪ್ರೇರಣೆಯಾಗಬೇಕು. ಸಾರ್ವಜನಿಕ ಜೀವನದಲ್ಲಿ ಪ್ರಾಮಾಣಿಕತೆ, ಸರಳತೆ, ಶಿಸ್ತು ಹಾಗೂ ದೇಶದ ಹಿತಾಸಕ್ತಿಗೆ ಆದ್ಯತೆ ನೀಡುವ ಮನೋಭಾವ ಬೆಳೆಸಿಕೊಳ್ಳುವುದು ಅಗತ್ಯ ಎಂಬ ಸಂದೇಶವನ್ನು ಕಾರ್ಯಕ್ರಮದ ಮೂಲಕ ಸಾರಲಾಯಿತು.



ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಟಿ.ಎ. ಶರವಣ, ಮಾಜಿ ಶಾಸಕರಾದ ನಾರಾಯಣ ರಾವ್ ಹಾಗೂ ಕೆ.ಎನ್. ತಿಪ್ಪೇಸ್ವಾಮಿ, ಪಕ್ಷದ ಗ್ರೇಟರ್ ಬೆಂಗಳೂರು ಅಧ್ಯಕ್ಷ ಎಚ್.ಎಂ. ರಮೇಶ್ ಗೌಡ, ಹಿರಿಯ ಮುಖಂಡ ಪ್ರಕಾಶ್ ಸೇರಿದಂತೆ ಪಕ್ಷದ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಸಾವಗಾಂವ ಗ್ರಾಮದ ಅಭಿವೃದ್ಧಿ ಕುರಿತು ಲಕ್ಷ್ಮೀ ಹೆಬ್ಬಾಳ್ಕರ್ ಸಮಾಲೋಚನೆ

"ಮುಂಜಾನೆಯ ಮೆರಗು"

ಬೆಳಗಾವಿ ಅ, 02– ಗ್ರಾಮಗಳ ಸಮಗ್ರ ಅಭಿವೃದ್ಧಿ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಬೆಳಗಾವಿ ಗ್ರಾಮೀಣ ಕ್ಷೇತ್ರದ ಸಾವಗಾಂವ ಗ್ರಾಮದಲ್ಲಿ ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸರ್ವಪಕ್ಷಗಳ ಮುಖಂಡರು ಹಾಗೂ ಗ್ರಾಮಸ್ಥರೊಂದಿಗೆ ಬಹಿರಂಗ ಸಭೆ ನಡೆಸಿ, ಗ್ರಾಮದ ಅಭಿವೃದ್ಧಿ ಕಾರ್ಯಗಳ ಕುರಿತು ಸಮಾಲೋಚನೆ ನಡೆಸಿದರು.

ಸಭೆಯಲ್ಲಿ ಗ್ರಾಮದಲ್ಲಿ ಈಗಾಗಲೇ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸುವುದರ ಜೊತೆಗೆ, ಮುಂಬರುವ ದಿನಗಳಲ್ಲಿ ಅನುಷ್ಠಾನಗೊಳಿಸಬೇಕಿರುವ ಹೊಸ ಯೋಜನೆಗಳು ಹಾಗೂ ಅಗತ್ಯ ಮೂಲಸೌಕರ್ಯಗಳ ಕುರಿತು ಚರ್ಚಿಸಲಾಯಿತು. ಗ್ರಾಮದ ಅಭಿವೃದ್ಧಿಗೆ ಸಂಬಂಧಿಸಿದಂತೆ ಗ್ರಾಮಸ್ಥರ ಅಭಿಪ್ರಾಯಗಳನ್ನು ಆಲಿಸಿ, ಸ್ಥಳೀಯವಾಗಿ ಎದುರಾಗುತ್ತಿರುವ ಸಮಸ್ಯೆಗಳು ಮತ್ತು ಬೇಡಿಕೆಗಳ ಕುರಿತು ಮಾಹಿತಿ ಪಡೆಯಲಾಯಿತು.



ಈ ಸಂದರ್ಭದಲ್ಲಿ ಗ್ರಾಮಸ್ಥರು ತಮ್ಮ ವಿವಿಧ ಕುಂದುಕೊರತೆಗಳನ್ನು ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಗಮನಕ್ಕೆ ತಂದರು. ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಭರವಸೆ ನೀಡಲಾಯಿತು. ಜನರೊಂದಿಗೆ ನೇರ ಸಂವಾದ ನಡೆಸುವ ಮೂಲಕ ಸ್ಥಳೀಯ ಅಗತ್ಯಗಳನ್ನು ಅರಿತು ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡುವ ಕುರಿತು ಚರ್ಚಿಸಲಾಯಿತು.

ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿ ಹಾಗೂ ಜನರ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವುದು ತಮ್ಮ ಆದ್ಯತೆಯಾಗಿದೆ ಎಂಬ ಆಶಯವನ್ನು ಲಕ್ಷ್ಮೀ ಹೆಬ್ಬಾಳ್ಕರ್ ವ್ಯಕ್ತಪಡಿಸಿದರು.

ಸಭೆಯಲ್ಲಿ ಯುವರಾಜಣ್ಣ ಕದಂ, ಬಾಳು ದೇಸೂರಕರ್, ಮನೋಹರ್ ಬೆಳಗಾಂವ್ಕರ್, ಎನ್.ಕೆ. ಪಾಟೀಲ, ಮಲ್ಲಪ್ಪ ಇಂಡಲ್ಗಕರ್, ನಾರಾಯಣ ಕಡ್ಲಿಕ್ಕರ್, ಪ್ರೇಮಾ ಮೋರೆ, ನೀರಾ ಕಾಕತ್ಕರ್, ಮಾಯಪ್ಪ ಗಾಟಿಗಸ್ತಿ, ಮೋಹನ್ ಕದಂ, ಗಣಪತಿ ಪಾಟೀಲ, ಬಾಳು ಪಾಟೀಲ, ರಘು ಖಿಂಡೇಕರ್, ಸಂತೋಷ ಪಾಟೀಲ, ನೇತಾಜಿ ಮುಂಗಲಿ, ಮಲ್ಲಪ್ಪ ಸಾವಗಾಂವ್ಕರ್ ಸೇರಿದಂತೆ ಹಲವು ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ರೈತರ ಸಮಸ್ಯೆಗಳಿಗೆ ಸ್ಪಂದಿಸಲು ಸರ್ಕಾರ ಮುಂದಾಗಲಿ: ನಿಖಿಲ್ ಕುಮಾರಸ್ವಾಮಿ



"ಮುಂಜಾನೆಯ ಮೆರಗು"

ಬಂಗಾರಪೇಟೆ ಅ, 02– ಬೆಳೆದ ಬೆಳೆಗೆ ಸೂಕ್ತ ಬೆಲೆ ದೊರೆಯದೆ ಹಾಗೂ ಮಾರುಕಟ್ಟೆಯಲ್ಲಿ ಅಗತ್ಯ ಮೂಲಸೌಕರ್ಯಗಳ ಕೊರತೆಯಿಂದ ರೈತರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಜೆಡಿಎಸ್ ಯುವ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಒತ್ತಾಯಿಸಿದರು.

ಕೋಲಾರ ಜಿಲ್ಲೆಯ ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ಎಪಿಎಂಸಿ ಮಾರುಕಟ್ಟೆಗೆ ಇಂದು ಭೇಟಿ ನೀಡಿದ ಅವರು, ರೈತರು ಹಾಗೂ ವ್ಯಾಪಾರಸ್ಥರೊಂದಿಗೆ ಸಮಾಲೋಚನೆ ನಡೆಸಿ, ಕೃಷಿ ಉತ್ಪನ್ನಗಳ ಮಾರಾಟದಲ್ಲಿ ಎದುರಾಗುತ್ತಿರುವ ತೊಂದರೆಗಳು, ಬೆಲೆ ಏ

ಗಾಂಧೀಜಿ–ಶಾಸ್ತ್ರಿ ಆದರ್ಶಗಳು ಇಂದಿಗೂ ಪ್ರಸ್ತುತ: ಗಣ್ಯರ ಅಭಿಮತ

"ಮುಂಜಾನೆಯ ಮೆರಗು"

ದಾವಣಗೆರೆ, ಅ.2: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 157ನೇ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿಯವರ 122ನೇ ಜನ್ಮದಿನಾಚರಣೆಯನ್ನು ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ದಾವಣಗೆರೆ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾ ಲೇಖಕಿಯರ ಸಂಘ ಹಾಗೂ ಕದಳಿ ಮಹಿಳಾ ವೇದಿಕೆ ವತಿಯಿಂದ ಶುಕ್ರವಾರ ಗೌರವಪೂರ್ವಕವಾಗಿ ಆಚರಿಸಲಾಯಿತು.



ದಾವಣಗೆರೆ ವಿದ್ಯಾನಗರ ಮುಖ್ಯ ರಸ್ತೆಯಲ್ಲಿರುವ ಕುವೆಂಪು ಕನ್ನಡ ಭವನದಲ್ಲಿ ಬೆಳಿಗ್ಗೆ 8.30ಕ್ಕೆ ನಡೆದ ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ, ಅವರ ದೇಶಸೇವೆ, ತ್ಯಾಗ, ಸರಳತೆ ಹಾಗೂ ಆದರ್ಶ ಜೀವನವನ್ನು ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಗಣ್ಯರು, ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಮಹಾತ್ಮ ಗಾಂಧೀಜಿಯವರ ಅಹಿಂಸೆ, ಸತ್ಯಾಗ್ರಹ ಮತ್ತು ಸತ್ಯದ ಮಾರ್ಗದ ಹೋರಾಟವು ಭಾರತೀಯ ಇತಿಹಾಸದಲ್ಲಿ ಮಹತ್ವದ ಅಧ್ಯಾಯವಾಗಿದೆ. ಸ್ವಾತಂತ್ರ್ಯ ದೊರೆತ ನಂತರ ದೇಶದ ಆಡಳಿತ ಹಾಗೂ ಅಭಿವೃದ್ಧಿಯ ಜವಾಬ್ದಾರಿಯನ್ನು ನಿಭಾಯಿಸಿದ ಲಾಲ್ ಬಹದ್ದೂರ್ ಶಾಸ್ತ್ರಿಯವರು ಸರಳತೆ, ಪ್ರಾಮಾಣಿಕತೆ ಮತ್ತು ಕರ್ತವ್ಯನಿಷ್ಠೆಗೆ ಮಾದರಿಯಾಗಿದ್ದರು ಎಂದು ಸ್ಮರಿಸಿದರು.

ಗಾಂಧೀಜಿಯವರ ವಿಚಾರಧಾರೆಗಳು ಕೇವಲ ಜಯಂತಿ ಆಚರಣೆಗೆ ಸೀಮಿತವಾಗದೆ, ಪ್ರತಿಯೊಬ್ಬರ ದೈನಂದಿನ ಬದುಕಿನಲ್ಲೂ ಅಳವಡಿಕೆಯಾಗಬೇಕು. ಸತ್ಯ, ಅಹಿಂಸೆ, ಸ್ವಚ್ಛತೆ, ಸಾಮಾಜಿಕ ಸಾಮರಸ್ಯ ಹಾಗೂ ಮಾನವೀಯ ಮೌಲ್ಯಗಳಿಗೆ ಆದ್ಯತೆ ನೀಡುವ ಮೂಲಕ ಗಾಂಧೀಜಿಯವರಿಗೆ ನಿಜವಾದ ಗೌರವ ಸಲ್ಲಿಸಬೇಕು ಎಂದು ಅಭಿಪ್ರಾಯಪಟ್ಟರು.


ಅದೇ ರೀತಿ 'ಜೈ ಜವಾನ್, ಜೈ ಕಿಸಾನ್' ಘೋಷಣೆಯ ಮೂಲಕ ದೇಶದ ಸೈನಿಕರು ಹಾಗೂ ರೈತರ ಮಹತ್ವವನ್ನು ಎತ್ತಿಹಿಡಿದ ಲಾಲ್ ಬಹದ್ದೂರ್ ಶಾಸ್ತ್ರಿಯವರ ಕೊಡುಗೆಯನ್ನು ಸ್ಮರಿಸಲಾಯಿತು. ಅಧಿಕಾರದಲ್ಲಿದ್ದರೂ ಸರಳ ಜೀವನ ನಡೆಸಿದ ಅವರ ವ್ಯಕ್ತಿತ್ವ ಇಂದಿನ ಪೀಳಿಗೆಗೆ ಪ್ರೇರಣೆಯಾಗಬೇಕು ಎಂದು ಹೇಳಿದರು.

ಸಾಹಿತ್ಯ, ಸಂಸ್ಕೃತಿ ಹಾಗೂ ಸಾಮಾಜಿಕ ಕ್ಷೇತ್ರಗಳ ಗಣ್ಯರು, ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಲೇಖಕಿಯರ ಸಂಘ ಮತ್ತು ಕದಳಿ ಮಹಿಳಾ ವೇದಿಕೆಯ ಸದಸ್ಯರು ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಗಾಂಧೀಜಿ ಹಾಗೂ ಶಾಸ್ತ್ರಿಯವರ ಜೀವನ ಮತ್ತು ದೇಶಸೇವೆಯ ಕುರಿತು ವಿಚಾರ ವಿನಿಮಯ ನಡೆಯಿತು.

ಗಾಂಧಿ–ಶಾಸ್ತ್ರಿ ಜಯಂತಿಗೆ ಅಧಿಕಾರಿಗಳ ಗೈರು; ಕಾರಣ ಕೇಳಿ ನೋಟಿಸ್

"ಮುಂಜಾನೆಯ ಮೆರಗು"

ಜಗಳೂರು ಅ, 02– ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನಾಚರಣೆ ಅಂಗವಾಗಿ ತಾಲೂಕು ಕಚೇರಿಯಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಹಬ್ಬಗಳ ಕಾರ್ಯಕ್ರಮಕ್ಕೆ ಹಲವು ಇಲಾಖೆಗಳ ಅಧಿಕಾರಿಗಳು ಗೈರಾಗಿರುವುದು ಚರ್ಚೆಗೆ ಕಾರಣವಾಯಿತು.



ತಾಲೂಕು ಪಂಚಾಯಿತಿ ಇಒ, ತೋಟಗಾರಿಕೆ ಇಲಾಖೆ, ಕೃಷಿ ಇಲಾಖೆ, ಮೀನುಗಾರಿಕೆ ಇಲಾಖೆ, ಖಜಾನೆ ಇಲಾಖೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿ, ತಾಲೂಕು ಆರೋಗ್ಯಾಧಿಕಾರಿ, ವೈದ್ಯಾಧಿಕಾರಿ, ಅಕ್ಷರ ದಾಸೋಹ ಇಲಾಖೆ, ರೇಷ್ಮೆ ಇಲಾಖೆ, ಎಪಿಎಂಸಿ ಕಾರ್ಯದರ್ಶಿ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಸಾಂಖ್ಯಿಕ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಪಶುಸಂಗೋಪನಾ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಕಾರ್ಯಕ್ರಮಕ್ಕೆ ಗೈರಾಗಿದ್ದರು.

ದೇಶದ ಮಹನೀಯರ ಜಯಂತಿ ಕಾರ್ಯಕ್ರಮಕ್ಕೆ ಹಲವು ಅಧಿಕಾರಿಗಳು ಗೈರಾಗಿರುವ ಬಗ್ಗೆ ಸಂಘ–ಸಂಸ್ಥೆಗಳ ಪ್ರತಿನಿಧಿಗಳು ಆಕ್ಷೇಪ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ತಹಶೀಲ್ದಾರ್ ಗುರುಬಸವರಾಜ್ ಅವರು ಗೈರಾಗಿದ್ದ ಅಧಿಕಾರಿಗಳಿಂದ ಗೈರಿಗೆ ಸಂಬಂಧಿಸಿದಂತೆ ಸೂಕ್ತ ಕಾರಣ ನೀಡುವಂತೆ ನೋಟಿಸ್ ಜಾರಿಗೊಳಿಸಲು ಕ್ರಮ ಕೈಗೊಂಡರು.

ನಿವೃತ್ತ ನೌಕರರಿಗೆ ಆರ್ಥಿಕ ಭದ್ರತೆ ಅಗತ್ಯ: ತಜ್ಞರ ಸಲಹೆ ಉಳಿತಾಯ ಹಾಗೂ ಹೂಡಿಕೆ ಕುರಿತು ಸಮಾಲೋಚನೆ

"ಮುಂಜಾನೆಯ ಮೆರಗು"

ಜಗಳೂರು ಅ, 02– ನಿವೃತ್ತಿಯ ನಂತರದ ಜೀವನವನ್ನು ಆರ್ಥಿಕವಾಗಿ ಸುಭದ್ರವಾಗಿಸಿಕೊಳ್ಳಲು ಉಳಿತಾಯ, ಹೂಡಿಕೆ ಹಾಗೂ ಹಣಕಾಸಿನ ಸಮರ್ಪಕ ನಿರ್ವಹಣೆ ಕುರಿತು ಪ್ರತಿಯೊಬ್ಬರೂ ಅರಿವು ಹೊಂದುವುದು ಅಗತ್ಯ ಎಂದು ಕಾರ್ಯಕ್ರಮದಲ್ಲಿ ಸಲಹೆ ನೀಡಲಾಯಿತು.

ಪಟ್ಟಣದ ಪ್ರೇರಣಾ ಸಮಾಜ ಸೇವಾ ಸಂಸ್ಥೆ ಚರ್ಚ್ ಸಭಾಂಗಣದಲ್ಲಿ ಕೋಟಕ್ ಸಂಸ್ಥೆ, ಪ್ರೇರಣಾ ಸಮಾಜ ಸೇವಾ ಸಂಸ್ಥೆ ಹಾಗೂ ಡಿಜಿಟಲ್ ಮೀಡಿಯಾ ಪ್ರಿಂಟರ್ ಅಂಡ್ ಪಬ್ಲಿಷರ್ ವತಿಯಿಂದ ಸರ್ಕಾರಿ ನಿವೃತ್ತ ನೌಕರರಿಗೆ ಸನ್ಮಾನ ಹಾಗೂ ಆರ್ಥಿಕ ಸಮಾಲೋಚನಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಪ್ರೇರಣಾ ಸಮಾಜ ಸೇವಾ ಸಂಸ್ಥೆ ಚರ್ಚನ ಮುಖ್ಯಸ್ಥ ಫಾದರ್ ನೆಲ್ಸನ್ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ನಿವೃತ್ತ ನೌಕರರು ತಮ್ಮ ಸೇವಾವಧಿಯಲ್ಲಿ ಸಮಾಜಕ್ಕೆ ನೀಡಿರುವ ಕೊಡುಗೆ ಶ್ಲಾಘನೀಯವಾಗಿದ್ದು, ನಿವೃತ್ತಿಯ ನಂತರವೂ ಅವರ ಅನುಭವ ಸಮಾಜಕ್ಕೆ ಮಾರ್ಗದರ್ಶನವಾಗಬೇಕು. ನಿವೃತ್ತ ಜೀವನದಲ್ಲಿ ಆರೋಗ್ಯದ ಜತೆಗೆ ಆರ್ಥಿಕ ಭದ್ರತೆಗೂ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹೇಳಿದರು.

ಕೋಟಕ್ ಸಂಸ್ಥೆಯ ಏರಿಯಾ ವ್ಯವಸ್ಥಾಪಕ ರಾಘವೇಂದ್ರ ಅವರು ಆರ್ಥಿಕ ಸಮಾಲೋಚನೆ ಕುರಿತು ಮಾಹಿತಿ ನೀಡಿದರು. ನಿವೃತ್ತಿಯ ನಂತರ ದೊರೆಯುವ ಪಿಂಚಣಿ, ಉಳಿತಾಯ ಹಾಗೂ ಇತರೆ ಆದಾಯವನ್ನು ಸಮರ್ಪಕವಾಗಿ ನಿರ್ವಹಿಸುವುದು, ಅಗತ್ಯಕ್ಕೆ ತಕ್ಕಂತೆ ಹಣಕಾಸಿನ ಯೋಜನೆ ರೂಪಿಸಿಕೊಳ್ಳುವುದು ಮತ್ತು ಹೂಡಿಕೆ ಮಾಡುವ ಮುನ್ನ ಸೂಕ್ತ ಮಾಹಿತಿ ಪಡೆದುಕೊಳ್ಳುವುದು ಮುಖ್ಯ ಎಂದು ತಿಳಿಸಿದರು.



ಕಾರ್ಯಕ್ರಮದಲ್ಲಿ ಸರ್ಕಾರಿ ಸೇವೆಯಿಂದ ನಿವೃತ್ತರಾದ ನೌಕರರನ್ನು ಸನ್ಮಾನಿಸಿ ಗೌರವಿಸಲಾಯಿತು. ನಿವೃತ್ತ ನೌಕರರು ತಮ್ಮ ಅನುಭವ ಹಂಚಿಕೊಂಡು ಆರ್ಥಿಕ ನಿರ್ವಹಣೆ ಕುರಿತು ಕೇಳಿದ ಪ್ರಶ್ನೆಗಳಿಗೆ ಸಮಾಲೋಚಕರಿಂದ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಪ್ರೇರಣಾ ಸಮಾಜ ಸೇವಾ ಸಂಸ್ಥೆ ಚರ್ಚ್ ನಿರ್ದೇಶಕ ಫಾದರ್ ಆಲ್ವಿನ್, ಬ್ರದರ್ ಪ್ರೇಮ್, ಕೋಟಕ್ ಸಂಸ್ಥೆಯ ಬ್ರಾಂಚ್ ವ್ಯವಸ್ಥಾಪಕ ಕಿರಣ್, ಸಂಸ್ಥೆಯ ಸಹಯೋಗಿಗಳಾದ ರುದ್ರಪ್ಪ, ಮೊಹಮ್ಮದ್ ಅಬ್ದುಲ್ ರಾಖೀಬ್, ಜಗದೀಶ್ ಸೇರಿದಂತೆ ಸರ್ಕಾರಿ ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಹಾಗೂ ನಿವೃತ್ತ ನೌಕರರು ಉಪಸ್ಥಿತರಿದ್ದರು.

ಗಾಂಧೀಜಿ ಅವರ ಸ್ವಚ್ಛಭಾರತದ ಕನಸು ಸಾಕಾರಗೊಳಿಸೋಣ: ಲೋಕ್ಯಾನಾಯ್ಕ

"ಮುಂಜಾನೆಯ ಮೆರಗು"

ಜಗಳೂರು, ಅ, 02– ಮಹಾತ್ಮ ಗಾಂಧೀಜಿಯವರು ಕಂಡ ಸ್ವಚ್ಛಭಾರತದ ಕನಸನ್ನು ಸಾಕಾರಗೊಳಿಸಲು ಪ್ರತಿಯೊಬ್ಬರೂ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಕರೆ ನೀಡಿದರು.



ಪಟ್ಟಣದ ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ 157ನೇ ಗಾಂಧೀ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯಪೂರ್ವದಲ್ಲಿ ಬ್ರಿಟಿಷರ ದಾಸ್ಯದಿಂದ ದೇಶವನ್ನು ಮುಕ್ತಗೊಳಿಸಲು ಮಹಾತ್ಮ ಗಾಂಧೀಜಿಯವರು ನಡೆಸಿದ ಕ್ವಿಟ್ ಇಂಡಿಯಾ ಚಳವಳಿ, ದಂಡಿ ಸತ್ಯಾಗ್ರಹ ಸೇರಿದಂತೆ ವಿವಿಧ ಹೋರಾಟಗಳು ದೇಶದ ಸ್ವಾತಂತ್ರ್ಯ ಚಳವಳಿಗೆ ಮಹತ್ವದ ಕೊಡುಗೆ ನೀಡಿವೆ. ಸತ್ಯ, ಅಹಿಂಸೆ, ಸರಳತೆ, ಸ್ವದೇಶಿ ಹಾಗೂ ಸ್ವಾವಲಂಬನೆಯಂತಹ ಗಾಂಧೀಜಿಯವರ ವಿಚಾರಧಾರೆಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಕವಾಗಿವೆ ಎಂದರು.

ಮಹಾತ್ಮ ಗಾಂಧೀಜಿಯವರು ಜಗತ್ತಿಗೆ ಸಾರಿದ ಸತ್ಯ ಮತ್ತು ಅಹಿಂಸೆಯ ತತ್ವಗಳನ್ನು ಗೌರವಿಸುವ ಉದ್ದೇಶದಿಂದ ವಿಶ್ವಸಂಸ್ಥೆಯು ಅಕ್ಟೋಬರ್ 2ರಂದು ಅಂತಾರಾಷ್ಟ್ರೀಯ ಅಹಿಂಸಾ ದಿನವನ್ನಾಗಿ ಆಚರಿಸುತ್ತಿದೆ. ಗಾಂಧೀಜಿಯವರ ಸ್ವಚ್ಛತೆ–ಯ ಸಂದೇಶವನ್ನು ಜನಸಾಮಾನ್ಯರಿಗೆ ತಲುಪಿಸುವ ನಿಟ್ಟಿನಲ್ಲಿ ಸೆ.17ರಿಂದ ಅ.2ರವರೆಗೆ ಪಟ್ಟಣದ ಶಾಲಾ–ಕಾಲೇಜುಗಳು ಹಾಗೂ ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತಾ ಹೀ ಸೇವಾ ಅಭಿಯಾನ ನಡೆಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಾಮನಿರ್ದೇಶಿತ ಸದಸ್ಯ ಕುರಿಜಯ್ಯಣ್ಣ, ಪಟ್ಟಣ ಪಂಚಾಯಿತಿ ಕಂದಾಯ ನಿರೀಕ್ಷಕ ನಾಯಕ್, ಆರೋಗ್ಯ ನಿರೀಕ್ಷಕ ಭರಮಣ್ಣ, ಪೌರಕಾರ್ಮಿಕರ ಸಂಘದ ತಾಲ್ಲೂಕು ಅಧ್ಯಕ್ಷ ಚಿನ್ನಪ್ಪ ಸೇರಿದಂತೆ ಪಟ್ಟಣ ಪಂಚಾಯಿತಿ ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

ಗಾಂಧೀಜಿ–ಶಾಸ್ತ್ರಿ ತ್ಯಾಗ, ಸರಳತೆ ಸಮಾಜಕ್ಕೆ ಆದರ್ಶ: ತಹಶೀಲ್ದಾರ್ ಗುರುಬಸವರಾಜ್

"ಮುಂಜಾನೆಯ ಮೆರಗು"

ಜಗಳೂರು, ಅ, 02– ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ತ್ಯಾಗ, ಸರಳತೆ, ಪ್ರಾಮಾಣಿಕತೆ ಮತ್ತು ದೇಶಸೇವೆಯ ಆದರ್ಶಗಳು ಇಂದಿನ ಸಮಾಜಕ್ಕೂ ದಾರಿದೀಪವಾಗಿವೆ ಎಂದು ತಹಶೀಲ್ದಾರ್ ಗುರುಬಸವರಾಜ್ ಹೇಳಿದರು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಇಬ್ಬರು ಮಹನೀಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿ ಅವರು ಸತ್ಯ, ಅಹಿಂಸೆ, ಸ್ವಚ್ಛತೆ, ಸರಳತೆ ಹಾಗೂ ಸಾಮಾಜಿಕ ಸಾಮರಸ್ಯಕ್ಕೆ ಹೆಚ್ಚಿನ ಒತ್ತು ನೀಡಿದ್ದರು. ಅವರ ಜೀವನ ಮತ್ತು ಹೋರಾಟದ ಮೌಲ್ಯಗಳನ್ನು ಕೇವಲ ಜಯಂತಿ ದಿನಕ್ಕೆ ಸೀಮಿತಗೊಳಿಸದೆ ಪ್ರತಿಯೊಬ್ಬರೂ ತಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಮತ್ತು ಪರಸ್ಪರ ಗೌರವದ ವಾತಾವರಣ ನಿರ್ಮಿಸುವುದು ಗಾಂಧೀಜಿಯವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ ಎಂದರು.

ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸರಳತೆ, ಪ್ರಾಮಾಣಿಕತೆ ಮತ್ತು ಕರ್ತವ್ಯನಿಷ್ಠೆಗೆ ಹೆಸರಾಗಿದ್ದ ನಾಯಕರು. ದೇಶದ ಸೈನಿಕರು ಹಾಗೂ ರೈತರ ಮಹತ್ವವನ್ನು ಸಾರುವ 'ಜೈ ಜವಾನ್, ಜೈ ಕಿಸಾನ್' ಎಂಬ ಘೋಷಣೆಯ ಮೂಲಕ ರಾಷ್ಟ್ರ ನಿರ್ಮಾಣದಲ್ಲಿ ಸೈನಿಕರು ಮತ್ತು ಅನ್ನದಾತರ ಪಾತ್ರವನ್ನು ಎತ್ತಿಹಿಡಿದಿದ್ದರು. ಅವರ ಸರಳ ಜೀವನ ಹಾಗೂ ದೇಶದ ಮೇಲಿನ ಬದ್ಧತೆ ಇಂದಿನ ಯುವಜನತೆಗೆ ಮಾದರಿಯಾಗಿದೆ ಎಂದು ಹೇಳಿದರು.



ಸ್ವಾತಂತ್ರ್ಯ ಹೋರಾಟದ ತ್ಯಾಗ ಸ್ಮರಣೀಯ

ಶಿರಸ್ತೇದಾರ್ ಬದ್ರಿನಾಥ್ ಮಾತನಾಡಿ, ಮಹಾತ್ಮ ಗಾಂಧೀಜಿ ಅವರು ಸತ್ಯ ಮತ್ತು ಅಹಿಂಸೆಯ ಮಾರ್ಗದ ಮೂಲಕ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ದಿಕ್ಕು ನೀಡಿದರು. ಸಮಾಜದ ಹಿಂದುಳಿದ ಹಾಗೂ ಶೋಷಿತ ವರ್ಗಗಳನ್ನು ಮುಖ್ಯವಾಹಿನಿಗೆ ತರಲು ಅವರು ನಿರಂತರವಾಗಿ ಶ್ರಮಿಸಿದ್ದರು. ಅವರ ತ್ಯಾಗಮಯ ಜೀವನ ಮತ್ತು ಕರ್ತವ್ಯಪ್ರಜ್ಞೆ ಪ್ರತಿಯೊಬ್ಬರಿಗೂ ಪ್ರೇರಣೆಯಾಗಿದೆ ಎಂದರು.

ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಸೇವೆ, ಹೋರಾಟ ಮತ್ತು ತ್ಯಾಗವನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಸ್ವಾತಂತ್ರ್ಯಕ್ಕಾಗಿ ಅನೇಕ ಮಹನೀಯರು ತಮ್ಮ ಜೀವನವನ್ನೇ ಮುಡಿಪಾಗಿಟ್ಟು ಹೋರಾಡಿದ್ದಾರೆ. ಅವರ ತ್ಯಾಗದ ಫಲವಾಗಿ ನಮಗೆ ಸ್ವಾತಂತ್ರ್ಯ ದೊರೆತಿದ್ದು, ದೇಶದ ಅಭಿವೃದ್ಧಿ ಮತ್ತು ಏಕತೆಗಾಗಿ ಅವರ ಆದರ್ಶಗಳನ್ನು ಮುಂದುವರಿಸುವ ಅಗತ್ಯವಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರೇಡ್–2 ತಹಶೀಲ್ದಾರ್ ಪಾಲಯ್ಯ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ್, ಬಿಇಒ ಈ. ಹಾಲಮೂರ್ತಿ, ಜಿಲ್ಲಾ ಪಂಚಾಯಿತಿ ಇಲಾಖೆಯ ಎಇಇ ಶಿವಮೂರ್ತಿ, ಅರಣ್ಯ ಇಲಾಖೆ ಅಧಿಕಾರಿಗಳಾದ ನಿತಿನ್ ಬಲ್ಲವರ್, ಮಹೇಶ್ವರಪ್ಪ, ಉಪನೋಂದಣಾಧಿಕಾರಿ ಬಷೀರ್ ಅಹ್ಮದ್, ಪಿಡಬ್ಲ್ಯೂಡಿ ಎಇಇ ಶಶಿಕಾಂತ್, ಆಹಾರ ಶಾಖೆಯ ಶಿವಪ್ರಕಾಶ್, ಆರ್ಐ ಕೀರ್ತಿರ್ಜಯ, ಭೂ ದಾಖಲೆಗಳ ಶಾಖೆಯ ಶ್ರೀನಿವಾಸ ರೆಡ್ಡಿ, ಕೊಟ್ರೇಶ್, ಬಿಸಿಎಂ ಇಲಾಖೆಯ ನಿಲಯ ಮೇಲ್ವಿಚಾರಕ ದೇವೇಂದ್ರಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಥ್ರೋಬಾಲ್‌ನಲ್ಲಿ ಹುಚ್ಚವ್ವನಹಳ್ಳಿ ಸರ್ಕಾರಿ ಶಾಲಾ ಬಾಲಕಿಯರ ಅಮೋಘ ಸಾಧನೆ

"ಮುಂಜಾನೆಯ ಮೆರಗು"

ಜಗಳೂರು, ಅ, 02– ಗ್ರಾಮೀಣ ಪ್ರತಿಭೆಗೆ ಮತ್ತೊಮ್ಮೆ ಕ್ರೀಡಾಂಗಣದಲ್ಲಿ ಮೆರಗು ಮೂಡಿದ್ದು, ಜಗಳೂರು ತಾಲ್ಲೂಕಿನ ಹುಚ್ಚವ್ವನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಾಲಕಿಯರ ಥ್ರೋಬಾಲ್ ತಂಡ ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಬೆಂಗಳೂರು ವಿಭಾಗ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದೆ.



ದಾವಣಗೆರೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಹುಚ್ಚವ್ವನಹಳ್ಳಿ ಶಾಲೆಯ ಬಾಲಕಿಯರು ಆತ್ಮವಿಶ್ವಾಸ ಹಾಗೂ ಸಂಘಟಿತ ಆಟದ ಮೂಲಕ ಗಮನ ಸೆಳೆದರು. ಪಂದ್ಯದುದ್ದಕ್ಕೂ ಉತ್ತಮ ಸಮನ್ವಯದೊಂದಿಗೆ ಆಡಿದ ವಿದ್ಯಾರ್ಥಿನಿಯರು ಎದುರಾಳಿ ತಂಡಗಳಿಗೆ ತೀವ್ರ ಪೈಪೋಟಿ ನೀಡಿ ಅಂತಿಮವಾಗಿ ಜಿಲ್ಲೆಯ ಚಾಂಪಿಯನ್ ಪಟ್ಟವನ್ನು ತಮ್ಮದಾಗಿಸಿಕೊಂಡರು.

ಜಿಲ್ಲಾಮಟ್ಟದ ಈ ಗಮನಾರ್ಹ ಸಾಧನೆಯೊಂದಿಗೆ ತಂಡವು ಇದೀಗ ಬೆಂಗಳೂರು ವಿಭಾಗ ಮಟ್ಟದ ಸ್ಪರ್ಧೆಗೆ ಅರ್ಹತೆ ಪಡೆದಿದೆ. ವಿಭಾಗ ಮಟ್ಟದಲ್ಲಿ ಜಗಳೂರು ತಾಲ್ಲೂಕು ಹಾಗೂ ದಾವಣಗೆರೆ ಜಿಲ್ಲೆಯನ್ನು ಪ್ರತಿನಿಧಿಸುವ ಅವಕಾಶ ವಿದ್ಯಾರ್ಥಿನಿಯರಿಗೆ ದೊರೆತಿದ್ದು, ಇದು ಶಾಲೆ, ಪೋಷಕರು ಹಾಗೂ ಹುಚ್ಚವ್ವನಹಳ್ಳಿ ಗ್ರಾಮಸ್ಥರಲ್ಲಿ ಸಂತಸ ಮೂಡಿಸಿದೆ.

ತಂಡದ ಸಾಧನೆಗೆ ಶಾಲೆಯ ಶಿಕ್ಷಕರು, ಪೋಷಕರು ಹಾಗೂ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿ ಅಭ